# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 95 | Volume - 02 Issue - 95
ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | RNI No: KARKAN/2023/88462
ಚಿತ್ರದುರ್ಗ | Chitradurga
ದಿನಾಂಕ: 29–10–2024 ಮಂಗಳವಾರ | Date: 29-10-2024 Tuesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಖಾಸಗಿ ಅಂಗಡಿ ಮಾಲೀಕರಿಂದ ಪುಟ್‌ಬಾತ್ ಅತಿಕ್ರಮಿಸಿ ವ್ಯಾಪಾರ 2

8.50 ಕೋಟಿ ರೂ.ವೆಚ್ಚದಲ್ಲಿ ಸೇತುವೆಗಳ ಕಾಮಗಾರಿಗೆ ಶಾಸಕರಿಂದ ಭೂಮಿ ಪೂಜೆ 3

ಅಂಬೇಡ್ಕರ್, ಗಾಂಧಿ ಶತ್ರುಗಳೇ–ಮಿತ್ರರೇ..... ಉದಾಹರಣೆ ಮತ್ತು ಎಚ್ಚರಿಕೆ...... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಜಲ ಶಕ್ತಿ ಸಂಸದೀಯ ಸಲಹಾ ಸಮಿತಿ ಸದಸ್ಯರಾಗಿ ಸಂಸದ ಕಾರಜೋಳ ನೇಮಕ

» ಚಿತ್ರದುರ್ಗ



18ನೇ ಲೋಕಸಭೆಯಲ್ಲಿ ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಎಂ. ಕಾರಜೋಳರವರನ್ನು ಸಂಸತ್ತಿನ ಜಲ ಶಕ್ತಿ ಸಂಸದೀಯ ಸಲಹಾ ಸಮಿತಿಯ ಸದಸ್ಯರನ್ನಾಗಿ ಲೋಕಸಭಾ ಸ್ಪೀಕರಾದ ಓಂ ಬಿರ್ಲಾರವರು ನೇಮಕ ಮಾಡಿರುತ್ತಾರೆ. ಈ ಸಲಹಾ ಸಮಿತಿಯಲ್ಲಿ ಒಬ್ಬರು ರಾಜ್ಯ ಸಭಾ ಸದಸ್ಯರು ಹಾಗೂ 15 ಜನ ಲೋಕಸಭಾ ಸದಸ್ಯರುಗಳು ಹಾಗೂ ಇಬ್ಬರು ಪದನಿಮಿತ್ತ ಸದಸ್ಯರು ಕಾರ್ಯನಿರ್ವಹಿಸಲಿದ್ದು, ಈ ಸಲಹಾ ಸಮಿತಿಯ ಅಧ್ಯಕ್ಷರುಗಳನ್ನಾಗಿ ಸಿ.ಆರ್. ಪಾಟೀಲ್, ವಿ. ಸೋಮಣ್ಣ ಹಾಗೂ ರಾಜ್ ಭೂಷಣ್ ಚೌಧರಿ ಇವರುಗಳನ್ನು ನೇಮಕ ಮಾಡಲಾಗಿದೆ.

### ಅ.29 ರಂದು ಜಿಲ್ಲಾ ಕ್ರೀಡಾಂಗಣ ಸಮಿತಿ ಸಭೆ

» ಚಿತ್ರದುರ್ಗ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅ.29 ರಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿ ಸಭೆ ಕರೆಯಲಾಗಿದೆ. ಸಭೆಯಲ್ಲಿ ಬಳಕೆದಾರರ ಶುಲ್ಕ ನಿಗದಿ ಕುರಿತು ಚರ್ಚಿಸಲಾಗುವುದು. ನೊಂದಾಯಿತ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಬಿ.ಎಂ.ನೆಲವಿಗಿ ತಿಳಿಸಿದ್ದಾರೆ.

### ಅ.29ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

220 ಕೆ.ವಿ.ಎ ಎಸ್.ಆರ್.ಎಸ್, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 66/11 ಕೆ.ವಿ ಚಿತ್ರದುರ್ಗದಲ್ಲಿ ಕೇಬಲ್ ಡಕ್ಟ್ ಮತ್ತು ಕೇಬಲ್ ಮರು ವ್ಯವಸ್ಥೆಯ ರಚನೆ ಕಾರ್ಯ, 66/11 ಕೆ.ವಿ ಪಂಡರಹಳ್ಳಿ ವಿ.ವಿ ಕೇಂದ್ರದಲ್ಲಿ ಕಂಡಕ್ಟರ್ ಬದಲಿ ಕೆಲಸ, 220/66/11 ಕೆ.ವಿ ಚಿತ್ರದುರ್ಗದಲ್ಲಿ 220 ಕೆ.ವಿ ಬಸ್ ಹತ್ತಿರ ಹಾಟ್ ಸ್ಪಾಟ್ ವೀಕ್ಷಣೆಯ ಕಾರ್ಯಕ್ಕಾಗಿ ವಿ.ವಿ ಕೇಂದ್ರಗಳಿಗೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಇದೇ ಅ.29ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಈ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರ ಹೊಮ್ಮುವ 66/11 ಕೆ.ವಿ ಮಾರ್ಗಗಳಾದ ಚಿತ್ರದುರ್ಗ, ಪಂಡರಹಳ್ಳಿ, ಹಿರೆಗುಂಟನೂರು, ವಿಜಾಪುರ, ಭರಮಸಾಗರ, ಸಿರಿಗೆರೆ, ಮಾದನಾಯಕನಹಳ್ಳಿ, ತುರುವನೂರು, ಹೆಚ್.ಡಿ.ಪುರ, ಚಿತ್ರಹಳ್ಳಿ, ಬಾಲೇನಹಳ್ಳಿ, ಹೊಳಲ್ಕೆರೆ, ಜೆ.ಎನ್.ಕೋಟೆ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು** : ಚಿತ್ರದುರ್ಗ ನಗರ, ಕೆಳಕೋಟೆ, ಬ್ಯಾಂಕ್ ಕಾಲೋನಿ, ಗೋನೂರು, ಬೆಳಘಟ್ಟ, ಜಿ.ಆರ್ ಹಳ್ಳಿ, ವಿದ್ಯಾನಗರ, ಸೀಬಾರ, ಸಿ.ಜಿ.ಹಳ್ಳಿ, ಜೆ.ಸಿ.ಆರ್ ಬಡಾವಣೆ, ಚಂದ್ರವಳ್ಳಿ, ಪಿ.ಕೆ.ಹಳ್ಳಿ, ಮಿಲ್ಲ್ ಏರಿಯಾ, ಕೆ.ಡ್ಬ್ಲೂ.ಎಸ್.ಎಸ್.ಬಿ, ಯೂನಿವರ್ಸಿಟಿ, ಕಾಪರ್ ಮೈನ್, ಕ್ಯಾದಿಗೆರೆ, ಜೆ.ಎನ್.ಕೋಟೆ, ಕಸವರಹಟ್ಟಿ, ಪಲ್ಲವಗೆರೆ, ಇಂಡಸ್ರಿಯಲ್ ಏರಿಯಾ, ಕೋಟೆ, ಜಿಲ್ಲಾ ಪಂಚಾಯತ್ , ಸಜ್ಜನಕೆರೆ, ದಂಡಿನಕುರುಬರಹಟ್ಟಿ, ಕೆನ್ನೆಡಲು ,ಅನ್ನೆಹಾಳು, ಹುಲ್ಲೂರು, ಪಂಡರಹಳ್ಳಿ, ಜಾನುಕೊಂಡ, ಸಿದ್ದಾಪುರ, ಗೊಡಬನಾಳು, ಸೊಂಡೆಕೊಳ, ಸೋಲ್ಲಾಪುರ, ಕುರುಬರಹಳ್ಳಿ, ಬೆಟ್ಟದನಾಗೇನಹಳ್ಳಿ, ಮಹದೇವನಕಟ್ಟೆ, ಸಿಂಗಾಪುರ, ಕಕ್ಕೆರು, ಹಿರೆಗುಂಟನೂರು, ಭೀಮಸಮುದ್ರ, ವಿಜಾಪುರ, ಭರಮಸಾಗರ, ಸಿರಿಗೆರೆ, ಮಾದನಾಯಕನಹಳ್ಳಿ, ತುರುವನೂರು, ಹೆಚ್.ಡಿ.ಪುರ, ಚಿತ್ರಹಳ್ಳಿ, ಬಾಲೇನಹಳ್ಳಿ, ಹೊಳಲ್ಕೆರೆ, ಜೆ.ಎನ್.ಕೋಟೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಜಿ.ತಿಮ್ಮರಾಯ ತಿಳಿಸಿದ್ದಾರೆ.

# ಹೆಣ್ಣು ಮಕ್ಕಳ ಘನತೆ ಕಾಪಾಡುವುದು ನಮ್ಮೆಲ್ಲರ ಜವಬ್ದಾರಿ: ನ್ಯಾ.ಎಂ.ವಿಜಯ್ ಹೇಳಿಕೆ

» ಚಿತ್ರದುರ್ಗ





ಹೆಣ್ಣು ಮಕ್ಕಳ ಘನತೆ ಕಾಪಾಡುವುದು ನಮ್ಮೆಲ್ಲರ ಜಬ್ದಾರಿಯಾಗಿದೆ. ಹೆಣ್ಣು ಮಕ್ಕಳ ಹಕ್ಕುಗಳನ್ನು ರಕ್ಷಿಸಲು ಸರ್ಕಾರ ಹಲವು ಯೋಜನೆ ಹಾಗೂ ಕಾನೂನುಗಳನ್ನು ಜಾರಿಗೆ ತಂದಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ಅಂತಾರಾಷ್ಟೀಯ ಹೆಣ್ಣು ಮಗುವಿನ ದಿನಾಚರಣೆ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಡಾನ್ ಬಾಸ್ಕೋ ಶಾಲೆ ಸಹಯೋಗದಲ್ಲಿ, ಸೋಮವಾರ ನಗರದ ಡಾನ್‌ಬಾಸ್ಕೋ ಶಾಲೆಯಲ್ಲಿ ಆಯೋಜಿಸಲಾಗಿದ್ದ, ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಕ್ಟೋಬರ್ 11 ರಂದು ಪ್ರತಿ ವರ್ಷ ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಆಚರಿಸಲಾಗುತ್ತಿದೆ. 'ಗರ್ಲ್ಸ್ ವಿಜನ್ ಫಾರ್ ದಿ ಫ್ಯೂಚರ್'ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ. ಹೆಣ್ಣು ಮಕ್ಕಳ ವಿದ್ಯಾಭ್ಯಾಸ ಹಾಗೂ ಆರೋಗ್ಯ ಬಗ್ಗೆ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ವಿಶ್ವ ಸಂಸ್ಥೆ ಈ ಧ್ಯೇಯವಾಕ್ಯವನ್ನು ಘೋಷಿಸಿದೆ. ಇದರೊಂದಿಗೆ ಹೆಣ್ಣು ಮಕ್ಕಳ ಹಕ್ಕುಗಳ ಕುರಿತಾಗಿ ಕಾನೂನು ಜಾಗೃತಿಯನ್ನು ಸಹ ಮೂಡಿಸುವ ಉದ್ದೇಶ ಹೊಂದಿದೆ. ಇದರ ಅಂಗವಾಗಿಯೇ ಇಂದು ಕಾನೂನು ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಸರ್ಕಾರದ ಹಲವು ಅಂಗಸ್ಥೆಗಳು ಹೆಣ್ಣು ಮಕ್ಕಳ ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ನ್ಯಾ. ಎಂ.ವಿಜಯ್ ತಿಳಿಸಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಹಾಗೂ ಪೋಕ್ಸೋ ಪ್ರಕರಣಗಳ ಸಂಖ್ಯೆ ಹೆಚ್ಚಿದ್ದು, ಹೆಣ್ಣು ಮಕ್ಕಳೇ ಇದರಲ್ಲಿ ಬಲಿಪಶುಗಳಾಗಿದ್ದಾರೆ. ಮುಖ್ಯವಾಗಿ ಹೆಣ್ಣು ಮಕ್ಕಳು ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ತಿಳಿದುಕೊಳ್ಳಬೇಕು. ತರಗತಿ, ಶಾಲೆ, ಮನೆ ಹಾಗೂ ಸಾರ್ವಜನಿಕ ಸ್ಥಳದಲ್ಲಿ ವಿಷಮ ಪರಿಸ್ಥಿತಿಗಳು ಎದುರಾದರೆ ನಿಮ್ಮ ಘನತೆ ರಕ್ಷಿಸಿಕೊಳ್ಳುವ ಎಲ್ಲಾ ಹಕ್ಕುಗಳು ನಿಮಗಿವೆ ಎಂದು ನ್ಯಾ.ಎಂ.ವಿಜಯ್ ಹೇಳಿದರು.

ಡಾನ್ ಬಾಸ್ಕೋ ಪ್ರೌಢ ಶಾಲಾ ಪ್ರಾಂಶುಪಾಲ ಉದಯ ಕುಮಾರ್ ಮಾತನಾಡಿ, ಹೆಣ್ಣು ಮಕ್ಕಳು ಸಮಾಜದಲ್ಲಿ ತಮ್ಮ ಹಕ್ಕುಗಳನ್ನು ಅರಿತು ಸಮಾನತೆಯಿಂದ ಜೀವನ ನಡೆಸಬೇಕು. ಸಮಾಜದಲ್ಲಿನ ದೌರ್ಜನ್ಯ, ಬಡತನ ಹಾಗೂ ತಾರತಮ್ಯತೆಯನ್ನು ಹೋಗಲಾಡಿಸಲು ಶಿಕ್ಷಣದಿಂದ ಮಾತ್ರ ಸಾಧ್ಯ. ಆದರೆ ಇಂದಿನ ಶಿಕ್ಷಣ ಕೇವಲ ಪಾಠ ಪ್ರವಚನಗಳಿಗಷ್ಟೇ ಸೀಮಿತವಾಗಿರುವುದು ದೌರ್ಭಾಗ್ಯ. ಪ್ರಮುಖವಾಗಿ ಹೆಣ್ಣು ಮಕ್ಕಳಿಗೆ ಇಂತಹ ಕಾರ್ಯಗಾರಗಳ ಮೂಲಕ ಅವರ ಹಕ್ಕುಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಇದು ಪುರುಷ ಪ್ರಧಾನ ಸಮಾಜವಾದ್ದರಿಂದ ಅನೇಕ ದೌರ್ಜನ್ಯಗಳು ಇಂದಿಗೂ ನಡೆಯುತ್ತಲೇ ಇವೆ. ತಮ್ಮ ಜೀವನದಲ್ಲಿ ಬರುವ ಇಂತಹ ದೈಹಿಕ ಮತ್ತು ಮಾನಸಿಕ ಸಮಸ್ಯೆಗಳನ್ನು ಎದುರಿಸುವ ಶಕ್ತಿ ಸಾಮರ್ಥ್ಯಗಳನ್ನು ಪ್ರತಿಯೊಬ್ಬರು ಬೆಳೆಸಿಕೊಳ್ಳಬೇಕು ಎಂದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಹೆಣ್ಣು ಮಕ್ಕಳು ಶಿಕ್ಷಣದ ಜೊತೆಗೆ ಕಾನೂನಿನ ಅರಿವನ್ನು ತಿಳಿದಿರಬೇಕು. ನಿಮ್ಮ ಭವಿಷ್ಯ ಸುಂದರವಾಗಿರಬೇಕಾದರೆ ಬಾಲ್ಯವಸ್ಥೆಯಲ್ಲಿ ಯಾವುದೇ ರೀತಿಯ ಕಿರುಕುಳ– ದೌರ್ಜನ್ಯಕ್ಕೆ ಒಳಗಾಗಬಾರದು. ಉನ್ನತ ಶಿಕ್ಷಣ ಪಡೆದು ಯಾವುದು ಸರಿ, ಯಾವುದು ತಪ್ಪು ಎಂಬುದನ್ನರಿತು ತಮ್ಮ ಭವಿಷ್ಯವನ್ನು ರೂಪಿಕೊಳ್ಳುವ ಸೈನಿಕರಾಗಬೇಕು. ಹೆಣ್ಣಿನ ಜೀವನ ಹಸನಾಗಿಸಲು ಪ್ರತಿಯೊಬ್ಬರು ಧ್ವನಿ ಎತ್ತಬೇಕು ಎಂದು ಹೇಳಿದರು.

ಉಪ ಪ್ರಧಾನ ಕಾನೂನು ಅಭಿರಕ್ಷಕ ಎಂ.ಮೂರ್ತಿ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಬಾಲ್ಯವಿವಾಹ ನಿಷೇಧ ಕುರಿತು ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಡಾನ್‌ಬಾಸ್ಕೋ ಶಾಲೆ ವಿದ್ಯಾರ್ಥಿಗಳು, ಶಿಕ್ಷಕರು ಸೇರಿದಂತೆ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.





ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾಯಿ ಹಾಸನಾಂಬ ದರ್ಶನ ಪಡೆದರು. ಸಚಿವರಾದ ಕೆ.ಎನ್.ರಾಜಣ್ಣ, ರಾಮಲಿಂಗಾರೆಡ್ಡಿ, ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್, ಶಾಸಕರಾದ ಕೆ.ಎಂ.ಶಿವಲಿಂಗೇಗೌಡರು ಸೇರಿ ಸ್ಥಳೀಯ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೆಳ್ಳಿ ಬಂಗಾರದ ಬೆಲೆ ಅಲ್ಪ ಇಳಿಕೆ

» ಬೆಂಗಳೂರು

ಕಳೆದ ವಾರ ತೀವ್ರವಾಗಿ ಏರಿಕೆ ಕಂಡಿದ್ದ ಚಿನ್ನದ ಬೆಲೆ ಇಂದು ಸೋಮವಾರ ಗ್ರಾಮ್‌ಗೆ 45 ರೂನಷ್ಟು ಕಡಿಮೆ ಆಗಿದೆ. ಅಪರಂಜಿ ಚಿನ್ನದ ಬೆಲೆ 7,980 ರೂ ಆಗಿದೆ. 22 ಕ್ಯಾರಟ್ ಮತ್ತು 18 ಕ್ಯಾರಟ್ ಚಿನ್ನದ ಬೆಲೆ ಕ್ರಮವಾಗಿ 7,315 ರೂ, 5,985 ರೂ ಇದೆ.

ಬೆಳ್ಳಿ ಬೆಲೆ ಭಾರತದಲ್ಲಿ 97 ರೂ, 98 ರೂ ಮತ್ತು 107 ರೂ ಇದೆ. ಬೆಂಗಳೂರು, ಅಕ್ಟೋಬರ್ 28: ನಿನ್ನೆ ಬಹುತೇಕ ಇಡೀ ವಾರ ಬೆಲೆ ಏರಿಕೆ ಕಂಡಿದ್ದ ಚಿನ್ನ ಈ ವಾರ ಇಳಿಕೆಯೊಂದಿಗೆ ಆರಂಭ ಕಂಡಿದೆ. ಸೋಮವಾರ ಚಿನ್ನದ ಬೆಲೆ ಗ್ರಾಮ್‌ಗೆ 45 ರೂನಷ್ಟು ಕಡಿಮೆ ಆಗಿದೆ. ಆಭರಣ ಚಿನ್ನದ ಬೆಲೆ 7,360 ರೂ ಇದ್ದದ್ದು 7,315 ರೂಗೆ ಇಳಿದಿದೆ. ಅಪರಂಜಿ ಚಿನ್ನ 8,029 ರೂನಿಂದ 7,980 ರೂಗೆ ಇಳಿದಿದೆ. ವಿದೇಶೀ ಮಾರುಕಟ್ಟೆಗಳಲ್ಲಿ ಹೆಚ್ಚಿನ ಕಡೆ ವ್ಯತ್ಯಯವಾಗಿಲ್ಲ. ಬೆಳ್ಳಿ ಬೆಲೆ ಕೆಲವಾರು ದಿನಗಳಿಂದ ಯಥಾಸ್ಥಿತಿಯಲ್ಲಿದ್ದು, ಇಂದು ಸೋಮವಾರವೂ ಅದೇ ಮುಂದುವರಿದಿದೆ. ಭಾರತದಲ್ಲಿ ಸದ್ಯ 10 ಗ್ರಾಮ್‌ನ 22 ಕ್ಯಾರಟ್ ಚಿನ್ನದ ಬೆಲೆ 73,150 ರುಪಾಯಿ ಇದೆ.

ಪ್ರಮುಖ ಸುದ್ದಿ

# ರಾಜ್ಯ ಸಚಿವ ಸಂಪುಟ ಸಭೆಯ ಪ್ರಮುಖ ಹೈಲೈಟ್ಸ್

» ಬೆಂಗಳೂರು

ಇಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ಮಹತ್ವದ ರಾಜ್ಯ ಸಚಿವ ಸಂಪುಟ ಸಭೆ ನಡೆಯಿತು. ಈ ಸಭೆಯಲ್ಲಿ ಒಳಮೀಸಲಾತಿ ಜಾರಿಗೆ ಸಮಿತಿ ರಚನೆ, ನೂತನ ಪ್ರವಾಸೋದ್ಯಮ ನೀತಿ ಜಾರಿ ಸೇರಿದಂತೆ ವಿವಿಧ ಮಹತ್ವದ ನಿರ್ಧಾರಗಳಿಗೆ ಅನುಮೋದನೆ ನೀಡಲಾಗಿದೆ.

ಇಂದಿನ ಸಂಪುಟ ಸಭೆಯ ಪ್ರಮುಖ ಹೈಲೈಟ್ಸ್ ಮುಂದಿದೆ ಓದಿ.

ರಾಜ್ಯ ಸಚಿವ ಸಂಪುಟ ಸಭೆ ಮುಕ್ತಾಯದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಂತ ಸಚಿವ ಹೆಚ್. ಕೆ ಪಾಟೀಲ್ ಅವರು, ಕೃಷಿ ಅಭಿವೃದ್ಧಿ ಏಜೆನ್ಸಿ ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ. ಬೀಜೋತ್ಪಾದನಾ ಕೇಂದ್ರಗಳು,ರೈತ ಸಂಪರ್ಕ ಕೇಂದ್ರ, ಕೃಷಿ ಯಂತ್ರ ಕೇಂದ್ರ,ಜೈವಿಕ ನಿಯಂತ್ರಣ ಪ್ರಯೋಗಾಲಯ, ಇದೆಲ್ಲವುಗಳನ್ನೂ ಒಂದೇ ಕಡೆ ತರುವ ನಿರ್ಧಾರ ಕೈಗೊಳ್ಳಲಾಗಿದೆ. ಹಾಗಾಗಿ ಕೃಷಿ ಅಭಿವೃದ್ಧಿ ಏಜೆನ್ಸಿ ಸ್ಥಾಪನೆ ಮಾಡಲಾಗುತ್ತಿದೆ ಎಂದರು. ಮೂರು ಕ್ಷೇತ್ರಗಳಿಗೆ ಉಪಚುನಾವಣೆ, ಮಾದರಿ ನೀತಿ ಸಂಹಿತೆಯನ್ನಗಮಿಸಿದ್ದೇವೆ. ಗುತ್ತಿಗೆ ಆದಾರದ ಮೇಲೆ 12 ಮಂದಿ ನೇಮಕಕ್ಕೆ ನಿರ್ಧರಿಸಲಾಗಿದೆ. ಮಾರುತಿ ಪ್ರಸನ್ನ ಮೇಲಿನ ತನಿಖೆ ಶಿಫಾರಸು ವಾಪಸ್, ಲೋಕಾಯುಕ್ತ ತನಿಖೆ ಶಿಫಾರಸು ವಾಪಸ್ ಗೆ ನಿರ್ಧರಿಸಲಾಗಿದೆ ಎಂದರು.

ಕರ್ನಾಟಕ ಸರುಕು, ತೆರಿಗೆ ತಿದ್ದುಪಡಿ ವಿಧೇಯಕಕ್ಕೆ ಒಪ್ಪಿಗೆ ನೀಡಲಾಗಿದೆ. ವಿವಾದಿತ ತೆರಿಗೆ ಮಿತಿಯನ್ನ ತರಲು ಅನುಕೂಲವಾಗಲಿದೆ. 40 ಕೋಟಿಗೆ ರಿಸ್ಟ್ರಿಕ್ಟ್ ಮಾಡಲು ಒಪ್ಪಿಗೆ ನೀಡಲಾಗಿದೆ. ಜಿಎಸ್ ಟಿ ಮೇಲ್ಮನವಿ ಹಕ್ಕು ಸ್ಥಾಪನೆಗೆ ಅವಕಾಶ ನೀಡಲಾಗುತ್ತಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ನೇಮಕಕ್ಕೆ ನಿರ್ಧರಿಸಲಾಗಿದೆ. 7045 ವೈದ್ಯಾಧಿಕಾರಿಗಳ ನೇಮಕ ಮುಂದುವರಿಕೆ ಒಪ್ಪಿಗೆ ನೀಡಲಾಗಿದೆ ಎಂದರು.

ಮಿಲಿಟರಿ ಸೆಂಟ್ರಲ್ ಕಮಾಂಡ್ ಸೆಂಟರ್ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. 3.16 ಎಕರೆ ಪ್ರದೇಶದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ. 102.80 ಕೋಟಿ ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ. ಐಜಿ ಆಫೀಸ್ ಆವರಣದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಇಸಿದರು.

ಅನೇಕಲ್ ಬಳಿ ಬಹುಮಹಡಿ ಕಟ್ಟಡ ನಿರ್ಮಾಣಕ್ಕೆ 100 ಕೋಟಿ ಅಂದಾಜು ವೆಚ್ಚಕ್ಕೆ ಒಪ್ಪಿಗೆ ನೀಡಲಾಗಿದೆ. ಶಿವಮೊಗ್ಗ



ವಿಮಾನ ನಿಲ್ದಾಣ ಅಭಿವೃದ್ಧಿಗೆ ಅನುದಾನವಾಗಿ 127 ಕೋಟಿ ಪರಿಷ್ಕೃತ ಮೊತ್ತಕ್ಕೆ ಅನುಮೋದನೆ ನೀಡಲಾಗಿದೆ. ಜಮೀನು ಕಳೆದುಕೊಂಡ ರೈತರಿಗೆ ಪರಿಹಾರ ನೀಡಲಾಗುತ್ತದೆ. ಪರಿಹಾರ ಬಾರದಿದ್ದರೆ ಅದನ್ನ ಪರಿಶೀಲಿಸುತ್ತೇವೆ ಎಂದರು.

ಮಾಲೂರು ಹೊಸಕೋಟೆ ಹೈಬ್ರಿಡ್ ರಸ್ತೆ ನಿರ್ಮಾಣ ಮಾಲು 3190 ಕೋಟಿಗಳ ವೆಚ್ಚಕ್ಕೆ ಸಂಪುಟ ಸಮ್ಮತಿ ನೀಡಲಾಗಿದೆ. ದೇವನಹಳ್ಳಿ ಏರ್ಪೋರ್ಟ್ ಗೆ ಕನೆಕ್ಟ್ ಮಾಡುವ ರಸ್ತೆ, ನ್ಯಾಷನಲ್ ಹೈವೇ ಮಾದರಿಯಲ್ಲಿ ಹೆದ್ದಾರಿ ನಿರ್ಮಾಣಕ್ಕೆ 110 ಕಿಮೀ ದೂರದವರೆಗೆ ಹೈಬ್ರಿಡ್ ರಸ್ತೆ, ಪಿಪಿಪಿ ಮಾಡೆಲ್ ನಡಿ ಕಾರಿಡಾರ್ ನಡುವೆ ನಿರ್ಮಾಣ ಮಾಡಲಾಗುವುದು.

ಅರಣ್ಯ ವಾಸಿಗಳ ಭೂ ಸಾಗುವಳಿ ಮಂಜೂರು ಮಾಡಲು ತಲಾ ಎರಡು ಎಕರೆ ಜಮೀನು ನೀಡಿಕೆ ಮಾಡಲಾಗುವುದು. 14 ಕುಟುಂಬಗಳಿಗೆ ಭೂಮಿ ನೀಡಲು ಒಪ್ಪಿಗೆ ನೀಡಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಅರಣ್ಯವಾಸಿಗಳು ಎಂದರು.

33 ಮಂದಿ ವೃತ್ತಿ ಶಿಕ್ಷಕರಿಗೆ ಬಡ್ತಿ ನೀಡಲು ಒಪ್ಪಿಗೆ ನೀಡಲಾಗಿದೆ. ಶಾಲಾ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಇವರಾಗಿದ್ದಾರೆ ಎಂದರು.

ಮುಧೋಳ ನಗರಕ್ಕೆ ಕುಡಿಯುವ ನೀರು ಪೂರೈಕೆ, ಕೃಷ್ಣಾ ನದಿಯಿಂದ ನೀರು ಪೂರೈಕೆಗೆ ಯೋಜನೆಗಾಗಿ 177.10 ಕೋಟಿ ವೆಚ್ಚದ ಯೋಜನೆಗೆ ಅನುಮೋದನೆ ನೀಡಲಾಗಿದೆ. ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ಈಕ್ವಿಟಿ ಷೇರು ಹೆಚ್ಚಳ ಮಾಡಲಾಗುತ್ತಿದೆ. ಶೇ.49% ರಿಂದ 90ಕ್ಕೆ ಹೆಚ್ಚಿಸಲು ಅನುಮೋದನೆ ನೀಡಲಾಗಿದೆ. ೩ಒಘಾಒಐ ನಲ್ಲಿನ ಸರ್ಕಾರದ ಷೇರು ಪ್ರಮಾಣ ಹೆಚ್ಚಳ ಮಾಡಲಾಗುತ್ತಿದೆ ಎಂದರು.

ಬೆಳಗಾವಿ ಚಳಿಗಾಲದ ಅಧಿವೇಶನದ ಚರ್ಚೆ ನಡೆಸಲಾಯಿತು. ದಿನಾಂಕ ನಿರ್ಣಯ ಸಿಎಂ ವ್ಯಾಪ್ತಿಗೆ ಬಿಡಲಾಗಿದೆ. ಡಿಸೆಂಬರ್ 2 ಇಲ್ಲವೇ 3ನೇ ವಾರ ಬರಲಿದೆ. ಕಾಂಗ್ರೆಸ್ ಎಐಸಿಸಿ ಅಧಿವೇಶನ ಇದೆ. ಅದಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಸಮಯ ಹೊಂದಾಣಿಕೆ ಮಾಡಲಾಗುವುದು. ಸಿಎಂ ಅಂತಿಮ ನಿರ್ಣಯ ಮಾಡ್ತಾರೆ ಎಂದರು.

ನೂತನ ಪ್ರವಾಸೋಧ್ಯಮ ನೀತಿಗೆ ಒಪ್ಪಿಗೆ ನೀಡಲಾಗಿದೆ. ಸಾಹಸ, ಕೃಷಿ, ಕರಾವಳಿ, ಬೀಚ್ ಪ್ರವಸೋಧ್ಯಮ, ಪಾರಂಪರಿಕ, ಪರಿಸರ, ಶೈಕ್ಷಣಿಕ ಪ್ರವಾಸೋದ್ಯಮ, ಒಳನಾಡು, ಸಾಹಿತ್ಯ, ಕಡಲು, ವೈದ್ಯಕಿಯ ಪ್ರವಾಸೋದ್ಯಮ,ಗಣಿಗಾರಿಕೆ,ರಾಜಕೀಯ, ಆಧ್ಯಾತ್ಮ, ಧಾರ್ಮಿಕ ಪ್ರವಾಸೋಧ್ಯಮ, ಬುಡಕಟ್ಟು, ವಿವಾಹ ಪ್ರವಾಸೋಧ್ಯಮಗಳು ಬರಲಿವೆ ಎಂದರು.

ದಲಿತ ಒಳ ಮೀಸಲಾತಿ ಜಾರಿ ವಿಚಾರವಾಗಿ ಚರ್ಚಿಸಲಾಗಿದೆ. ಒಳಮೀಸಲಾತಿ ಕಲ್ಪಿಸಲು ಸಂಪುಟ ಒಪ್ಪಿಗೆ ನೀಡಿದೆ. ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದ ಕಮಿಟಿ ರಚನೆ ಮಾಡಲಾಗುತ್ತದೆ. ಡಾಟಾ ಪಡೆದು ಸಮಗ್ರವಾಗಿ ಪರಿಶೀಲಿಸಿ ವರದಿ ನೀಡಲಾಗುತ್ತದೆ. ಮೂರು ತಿಂಗಳೊಳಗೆ ವರದಿ ನೀಡಲು ಸಂಪುಟ ಒಪ್ಪಿಗೆ ನೀಡಿದೆ. ನೇಮಕಾತಿ ಪ್ರಕ್ರಿಯೆಗಳಿಗೆ ತಡೆ ನೀಡಲಾಗಿದೆ. ಯಾವುದೇ ನೇಮಕಾತಿ ಮಾಡದಂತೆ ನಿರ್ಣಯ ಕೈಗೊಳ್ಳಲಾಗಿದೆ ಎಂದರು.

ಮೈಸೂರು ವಿಶ್ವೇಶ್ವರ ತಾಂತ್ರಿಕ ವಿವಿ ಆವರಣದಲ್ಲಿ ಬಹುಕೌಶಲ್ಯ ಕೇಂದ್ರ ಸ್ಥಾಪನೆ ಮಾಡಲಾಗುತ್ತಿದೆ.

## ಫಾಸ್ಟ್ ನ್ಯೂಸ್

### ಕಿಶೋರಕಾರ್ಮಿಕ ಮಕ್ಕಳಿಗೆ ಕಿಟ್ ವಿತರಣೆ

» ದಾವಣಗೆರೆ

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಕಾರ್ಮಿಕ ಇಲಾಖೆಯಿಂದ ಅಕ್ಟೋಬರ್ 25 ರಂದು ನಗರದ ವಿವಿಧ ಕಡೆ ನಡೆಸಿದ ಅನಿರೀಕ್ಷಿತ ದಾಳಿಯಲ್ಲಿ ಪತ್ತೆಯಾದ 4 ಜನ ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳಿಗೆ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಹಾಗೂ ಕಾರ್ಮಿಕ ಇಲಾಖೆ ಸಹಾಯಕ ಕಾರ್ಮಿಕ ಆಯುಕ್ತರಾದ ಡಾ.ಅವಿನಾಶ್‌ನಾಯ್ಕ ಇವರು ಎಸ್.ಸಿ.ಎಸ್.ಪಿ-ಟಿ.ಎಸ್.ಪಿ ಯೋಜನೆಯಡಿ ಫಲಾನುಭವಿಗಳಿಗೆ ಆಹಾರಧಾನ್ಯ, ಶೈಕ್ಷಣಿಕ ಸಾಮಗ್ರಿಗಳು, ಸಮವಸ್ತ್ರ ಹಾಗೂ ಇನ್ನಿತರೆ ಸಾಮಗ್ರಿಗಳ ಕಿಟ್‌ಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ಆರ್.ನಾಗೇಶ್ ಹಾಗೂ ಯೋಜನಾ ನಿರ್ದೇಶಕರು ಪ್ರಸನ್ನ.ಇ.ಎನ್ ಉಪಸ್ಥಿತರಿದ್ದರು.

### ನ.26ಕ್ಕೆ ವಾರ್ಷಿಕ ಮಹಾಸಭೆ

» ದಾವಣಗೆರೆ

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ವಾರ್ಷಿಕ ಮಹಾಸಭೆಯನ್ನು ನವಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಇವರ ಅಧ್ಯಕ್ಷತೆಯಲ್ಲಿ ನಗರದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ದೇವರಾಜ ಅರಸ್ ಬಡಾವಣೆ, ಎ. ಬ್ಲಾಕ್ ಇಲ್ಲಿ ಆಯೋಜಿಸಲಾಗಿದೆ.

### ಮಹಿಳೆ ಕಾಣೆ

» ದಾವಣಗೆರೆ

ಬಡಾವಣೆ ಪೊಲೀಸ್ ಠಾಣೆಯ ವ್ಯಾಪ್ತಿಯ ಕಾಸರಘಟ್ಟ ಗ್ರಾಮ, ದೊಡ್ಡಬುಳ್ಳಾಪುರ.ತಾ. ಬೆಂಗಳೂರು ಗ್ರಾಮಾಂತರ ವಾಸಿಯಾದ ಧನುಶ್ರೀ ಕೋಂ ರಮೇಶ 23 ವರ್ಷ, ಇವರು ಕಳೆದ ದಿ:25-9-2023 ರಂದು 12.30ರ ಸಮಯದಲ್ಲಿ ದಾವಣಗೆರೆ ಬಕ್ಕೇಶ್ವರ ಶಾಲೆ ಹತ್ತಿರ, ಎಂ.ಸಿ.ಸಿ. ಬಿ ಬ್ಲಾಕ್ ನಿಂದ ಹೋದವರು ವಾಪಾಸ್ಸು ಬಂದಿರುವುದಿಲ್ಲ. ಚಹರೆ ವಿವರ; ಎತ್ತರ 5.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ತೆಳ್ಳನೆ ಮೈಕಟ್ಟು, ಕೋಲು ಮುಖ, ಹುಬ್ಬುಹಲ್ಲು ಹೊಂದಿರುತ್ತಾರೆ. ಕನ್ನಡ ಭಾಷೆ ಮಾತಾನಾಡುತ್ತಾರೆ. ಹೋಗುವಾಗ ಬಿಳಿ ಟಾಪ್ ಮತ್ತು ನೀಲಿ ಪ್ಯಾಂಟ್ ಧರಿಸಿರುತ್ತಾರೆ, ಮಾಹಿತಿ ಇದ್ದಲ್ಲಿ ಬಡಾವಣೆ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2 ವರ್ಷದ ಬಿ.ಇಡಿ ಕೋರ್ಸಿಗಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನ 2 ವರ್ಷದ ಬಿ.ಇಡಿ ಕೋರ್ಸಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಇಲಾಖಾ ವೆಬ್‌ಸೈಟ್ https://Schooleducation.karnataka.gov.in/ ನಲ್ಲಿ ಪ್ರಕಟಿಸಲಾಗಿದೆ. ಭರ್ತಿಮಾಡುವ ಮುನ್ನ ವೆಬ್‌ಸೆಟ್‌ನಲ್ಲಿರುವ ಶೀರ್ಷಿಕೆಯಡಿಯಲ್ಲಿ ಮಾಹಿತಿಯಂತೆಅರ್ಜಿಗಳನ್ನುಭರ್ತಿಮಾಡುವುದು. ನವಂಬರ್ 14 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿ ಸಲ್ಲಿಸುವ ವಿಧಾನ, ಅರ್ಹತೆ, ಮೀಸಲಾತಿ ವಿವರಗಳು ಮತ್ತು ಇತರೆ ಮಾಹಿತಿಗಳನ್ನು https://Schooleducation.karnataka.gov.in/ ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಡಯಟ್ ಹಿರಿಯ ಉಪನ್ಯಾಸಕರು ಮಹಮ್ಮದ್ ಅಯೂಬ್ ಸೊರಬ್ ಮೊ.ಸಂ: 9164489972, ಡಯಟ್ ಶಿಕ್ಷಕರಾದ ಶಾಂತಾ ಮುಧೋಳ್ ಮೊ.ಸಂ: 9844401092, ಕಚೇರಿಯ ದೂ.ಸಂ: 08192 -231156 ಯನ್ನು ಸಂಪರ್ಕಿಸಲು ಡಯಟ್ ಪ್ರಾಚಾರ್ಯರರಾದ ಗೀತಾ ತಿಳಿಸಿದ್ದಾರೆ.

### ಅರಿವು ಸಪ್ತಾಹ

» ದಾವಣಗೆರೆ

ದಾವಣಗೆರೆ ಲೋಕಾಯುಕ್ತ ವಿಭಾಗದಿಂದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ಅರಿವು ಸಪ್ತಾಹ ಏರ್ಪಡಿಸಲಾಗಿದ್ದು ಇದರ ಅಂಗವಾಗಿ ಅಕ್ಟೋಬರ್ 29 ರಂದು ಬೆಳಗ್ಗೆ 10 ಗಂಟೆಗೆ ತುಂಗಭದ್ರಾ ಸಭಾಂಗಣದಲ್ಲಿ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಏರ್ಪಡಿಸಲಾಗಿದೆ.

### ಮನೆಯಿಂದಲೇ ಜೀವನ ಪ್ರಮಾಣ ಪತ್ರ ಪಡೆಯಿರಿ

» ದಾವಣಗೆರೆ

ಭಾರತೀಯ ಅಂಚೆ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್‌ಗಳ ಮೂಲಕ ಮನೆ ಬಾಗಿಲಿನಲ್ಲೇ ಪಿಂಚಣಿದಾರರು ಸುಲಭವಾಗಿ ಡಿಜಿಟಲ್ ಜೀವನ ಪ್ರಮಾಣ ಪತ್ರವನ್ನು ಸಲ್ಲಿಸಲು ವ್ಯವಸ್ಥೆ ಕಲ್ಪಿಸಲಾಗಿದೆ. ಪಿಂಚಣಿದಾರರು ಅಥವಾ ಕುಟುಂಬದ ಪಿಂಚಣಿದಾರರು ತಮ್ಮ ಹತ್ತಿರದ ಅಂಚೆ ಕಚೇರಿಯಲ್ಲಿ ಅಥವಾ ಪೋಸ್ಟ್ ಮ್ಯಾನ್ ಮೂಲಕ ರೂ.70 ಶುಲ್ಕ ನೀಡುವುದರೊಂದಿಗೆ ಕೆಲವೇ ನಿಮಿಷಗಳಲ್ಲಿ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ, ಪಿಪಿಒ ಸಂಖ್ಯೆ ಮತ್ತು ಪಿಂಚಣಿದಾರರ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ತಮ್ಮ ಬೆರಳಚ್ಚು ಪರಿಶೀಲಿಸಿ ಡಿಜಿಟಲ್ ಜೀವನ ಪ್ರಮಾಣ ಪತ್ರವನ್ನು ನ.30 ರೊಳಗಾಗಿ ಪಡೆಯಬಹುದು.

# ಬೆಂಗಳೂರು ರಸ್ತೆ ಖಾಸಗಿ ಅಂಗಡಿ ಮಾಲೀಕರಿಂದ ಪುಟ್‌ಬಾತ್ ಅತಿಕ್ರಮಿಸಿ ವ್ಯಾಪಾರ: ಕ್ರಮಕ್ಕೆ ಒತ್ತಾಯ

» ಚಳ್ಳಕೆರೆ





ನಗರದ ಬೆಂಗಳೂರು ರಸ್ತೆಯಲ್ಲಿರುವ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಗೆ ಬರುವ ರಾಘವೇಂದ್ರ ಮೆಟಲ್‌ಸ್ಟೋರ್ ಮಾರಾಟ ಮಳಿಗೆಯ ಮಾಲೀಕರು ಅಂಗಡಿ ಮುಂಭಾಗದ ಪುಟ್‌ಬಾತ್ ಮೇಲೆ ಪ್ರತಿನಿತ್ಯ ವ್ಯವಹಾರ ನಡೆಸುತ್ತಿರುವುದನ್ನು ತೆರವುಗೊಳಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಕ್ಷಣಾವೇದಿಕೆ(ಪ್ರವೀಣ್‌ಶೆಟ್ಟಿಬಣ) ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೌರಾಯುಕ್ತರಿಗೆ ಮನವಿ ಮಾಡಿದೆ.

ತಾಲ್ಲೂಕು ಅಧ್ಯಕ್ಷ ಪಿ.ಮಂಜುನಾಥ ಮಾತನಾಡಿ, ಸಾರ್ವಜನಿಕ ರಸ್ತೆಗಳನ್ನು ವಾಣಿಜ್ಯೋದ್ಯಮಿಗಳು ಆಕ್ರಮಿಸಿಕೊಳ್ಳುವ ಬಗ್ಗೆ ಈ ಹಿಂದೆಯೇ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಹಬ್ಬಹರಿದಿನಗಳಲ್ಲಿ ಚಳ್ಳಕೆರೆ ನಗರಕ್ಕೆ ಗ್ರಾಮೀಣ ಭಾಗದ ಜನರು ಹೆಚ್ಚಿನಸಂಖ್ಯೆಯಲ್ಲಿ ಆಗಮಿಸುತ್ತಾರೆ. ಪುಟ್‌ಬಾತ್‌ಗಳನ್ನು ಅಂಗಡಿ ಮಾಲೀಕರು ಅಕ್ರಮಿಸಿಕೊಂಡಿರುವುದರಿಂದ ವಾಹನ ಸಂಚಾರ ಹಾಗೂ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಪುಟ್‌ಬಾತ್ ಅತಿಕ್ರಮಣವನ್ನು ತೆರವುಗೊಳಿಸಬೇಕು ಎಂದರು. ಸಂಘಟನೆಯ ತಾಲ್ಲೂಕು ಗೌರವಾಧ್ಯಕ್ಷ ಸಿ.ಬೋಜರಾಜ ಮನವಿ ಅರ್ಪಿಸಿ ಮಾತನಾಡಿ, ಬೆಂಗಳೂರು ರಸ್ತೆಯಲ್ಲಿ ಪ್ರತಿನಿತ್ಯ ದಿನದ 24ಗಂಟೆಗಳ ಕಾಲ ವಾಹನ ಹಾಗೂ ಸಾರ್ವಜನಿಕರ ಸಂಚಾರ ನಿರಂತರವಾಗಿರುತ್ತದೆ. ವಿಶೇಷವಾಗಿ ಹಬ್ಬಹರಿದಿನಗಳಲ್ಲಿ ಮಹಿಳೆಯರು, ಮಕ್ಕಳ ಓಡಾಟ ಹೆಚ್ಚಾಗಿರುತ್ತದೆ. ಬೆಂಗಳೂರು ರಸ್ತೆಯಲ್ಲಿ ಎಲ್ಲಾ ರೀತಿಯ ಅಂಗಡಿಗಳಿದ್ದು ಹೆಚ್ಚು ಜನರು ಈ ರಸ್ತೆಯನ್ನೇ ಅವಲಂಭಿಸಿದ್ದಾರೆ ಕೂಡಲೇ ಕ್ರಮ ಕೈಗೊಳ್ಳು ಅಧಿಕಾರಿಗಳಿಗೆ ಮನವಿ ಮೂಲಕ ಆಗ್ರಹಿಸಿದೆ ಎಂದರು. ಮನವಿ ಸ್ವೀಕರಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಿ ಕ್ರಮಕೈಗೊಳ್ಳುವ ಭರವಸೆ ನೀಡಿದ್ದಾರೆ. ಪ್ರಧಾನ ಕಾರ್ಯದರ್ಶಿ ಮರಿಕುಂಟೆಚಂದ್ರಣ್ಣ, ಸಂಘಟನಾ ಕಾರ್ಯದರ್ಶಿ ಮುರುಳಿ, ಕಾರ್ಮಿಕ ಘಟಕ ಅಧ್ಯಕ್ಷ ವಿ.ಮಂಜುನಾಥ, ಯುವಘಟಕದ ಅಧ್ಯಕ್ಷ ಪಿ.ರವಿಕುಮಾರ್ ಇದ್ದರು.

# ತೆರೆದಮನೆ ಕಾರ್ಯಕ್ರಮ: ವಿವಿಧ ಶಾಲಾ ಮಕ್ಕಳಿಂದ ಠಾಣೆ ಕರ್ತವ್ಯದ ಬಗ್ಗೆ ಮಾಹಿತಿ

» ಚಳ್ಳಕೆರೆ



ಪ್ರತಿನಿತ್ಯ ಹಲವಾರು ಸಮಸ್ಯೆಗಳನ್ನು ಎದುರಿಸಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗುದಂತೆ ಜಾಗೃತೆವಹಿಸುವುದಲ್ಲದೆ, ಸಮಾಜ ಘಾತುಕ ಶಕ್ತಿಗಳ ಕಾರ್ಯಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಯಂತ್ರಿಸುವ ಸಾರ್ವಜನಿಕರಿಗೆ ನೆಮ್ಮದಿಯ ಜೀವನವನ್ನು ಕಲ್ಪಿಸುವ ಪೊಲೀಸ್ ಇಲಾಖೆಯ ಕಾರ್ಯ ಶ್ಲಾಘನೀಯವೆಂದು ಕಸ್ತೂರಿಬಾಗಾಂಧಿ ವಸತಿ ಬಾಲಕಿಯವರ ಶಾಲೆಯ ಮುಖ್ಯೋಪಾಧ್ಯಾಯಿನಿ ಚಾರುಮತಿ ತಿಳಿಸಿದರು.

ಅವರು, ಸೋಮವಾರ ನಗರದ ಪೊಲೀಸ್ ಠಾಣೆಗೆ ಶಾಲಾ ವಿದ್ಯಾರ್ಥಿಗಳನ್ನು ತೆರೆದ ಮನೆಯ ಕಾರ್ಯಕ್ರಮದಡಿ ಕರೆದ್ಯೊಯ್ದು ಪೊಲೀಸ್ ಇಲಾಖೆಯ ಕಾರ್ಯಚಟುವಟಿಕೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಪೊಲೀಸ್ ಇಲಾಖೆ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ಏಕೈಕ ಇಲಾಖೆಯಾಗಿದೆ. ಪ್ರತಿನಿತ್ಯವೂ, ಪ್ರತಿಕ್ಷಣವೂ ಸಮಸ್ಯೆಗಳು ಎದುರಾಗುತ್ತವೆ ಆದರೆ ಅವುಗಳನ್ನು ಜಾಣ್ಮೆಯಿಂದ ಮುಕ್ತಾಯಗೊಳಿಸುವುದು ಪೊಲೀಸರ ಕರ್ತವ್ಯವಾಗಿದೆ. ಪ್ರತಿಯೊಂದು ಸಮಸ್ಯೆಗೂ ಪೊಲೀಸ್ ಇಲಾಖೆ ನಿತ್ಯ ಸ್ಪಂದಿಸುತ್ತಾ ಬಂದಿದೆ. ಶಿಸ್ತು ಮತ್ತು ಸಂಯಮವನ್ನು ಸಾರ್ವಜನಿಕರಿಗೆ ಕಲಿಸಿಕೊಡುವ ಏಕೈಕ ಇಲಾಖೆ ಎಂದರಲ್ಲದೆ, ಪೊಲೀಸ್ ಇಲಾಖೆ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪಿಎಸ್‌ಐ ಕೆ.ಸತೀಶ್‌ನಾಯ್ಕ, ಧರೆಪ್ಪಬಾಳಪ್ಪದೊಡ್ಡಮನಿ, ವಿದ್ಯಾರ್ಥಿಗಳಿಗೆ ಪೊಲೀಸ್ ಇಲಾಖೆಯ ಕಾರ್ಯಚಟುವಟಿಕೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿದರು. ವಿಶೇಷವಾಗಿ ಠಾಣೆಯ ಒಳಭಾಗದಲ್ಲಿರುವ ಬಂಧಿಖಾನೆ ಬಗ್ಗೆ ತಿಳಿಸಲಾಯಿತು. ಯಾವುದೇ ತಪ್ಪುವೆಸಗಿದರೂ ಮುಲಾಜಿಲ್ಲದೆ ಅಂತಹವರನ್ನು ವಶಕ್ಕೆ ಪಡೆದು ಬಂಧಿಖಾನಿಯಲ್ಲಿ ಇಡಲಾಗುವುದು ಎಂದು ವಿದ್ಯಾರ್ಥಿಗಳಿಗೆ ತಿಳಿಸಲಾಯಿತು. ಪೊಲೀಸ್ ಇಲಾಖೆಯ ಸಹಕಾರದಿಂದ ಎಲ್ಲೆಡೆ ಶಾಂತಿ ನೆಲಸಲು ಸಾಧ್ಯವಾಗಿದೆ ಎಂದು ಮಕ್ಕಳಿಗೆ ಮನವರಿಕೆ ಮಾಡಿದರು. ಬಿ.ಎಂ.ಸರ್ಕಾರಿ ಪ್ರೌಢಶಾಲೆ, ವಾಸವಿ ಶಾಲೆ, ಜ್ಞಾನಧಾರ ಶಾಲೆ, ಲಿಟ್ಲಪ್ಲವರ್ ಶಾಲೆಯ ವಿದ್ಯಾರ್ಥಿಗಳು ಠಾಣೆಗೆ ಭೇಟಿ ನೀಡಿ ತೆರೆದ ಮನೆಯ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಎಎಸ್‌ಐ ರವಿಕುಮಾರ್, ಪೇದೆಗಳಾದ ಮಂಜುನಾಥ, ಶಂಕರ, ಶಿಕ್ಷಕಿ ರಾಣಿ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ವಿವಿಧ ವಿದ್ಯಾರ್ಥಿಗಳು ಸೋಮವಾರ ನಗರದ ಪೊಲೀಸ್‌ಠಾಣೆಗೆ ಭೇಟಿ ನೀಡಿ ತೆರೆದ ಮನೆ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಸಿಎಂ ನೇತೃತ್ವದಲ್ಲಿ ರಾಜ್ಯ ಸಚಿವ ಸಂಪುಟ ಸಭೆಯ ಪ್ರಮುಖ ಹೈಲೈಟ್ಸ್

» ಮೊದಲ ಪುಟದಿಂದ

35 ಕೋಟಿ ವೆಚ್ಚದಲ್ಲಿ ಸ್ಥಾಪನೆ ಮಾಡಲಾಗುವುದು. ಬೀದರ್ ವಿಮಾನ ಕಾರ್ಯಾಚರಣೆ ಅನುಮೋದನೆ ನೀಡಲಾಗಿದೆ. ಆದಿಚುಂಚನಗಿರಿ ಮಠಕ್ಕೆ ಭೂಮಿ ನೀಡಲು ಒಪ್ಪಿಗೆ ನೀಡಲಾಗಿದೆ. ಹಾಸನ ನಗರಸಭೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಸಲು ಒಪ್ಪಿಗೆ ನೀಡಲಾಗಿದೆ ಎಂದರು. ಒಬಿಸಿ ಹಾಸ್ಟೆಲ್ ಗಳಿಗೆ ಮೂಲ ಸೌಕರ್ಯ ಕಲ್ಪಿಸಲು 39.07 ಕೋಟಿ ವೆಚ್ಚಕ್ಕೆ ಸಂಪುಟ ಒಪ್ಪಿಗೆ ನೀಡಲಾಗಿದೆ. ರಾಯಚೂರು ವಿವಿಗೆ ವಾಲ್ಮೀಕಿ ಹೆಸರು ನಾಮಕರಣ ಮಾಡಲಾಗುತ್ತಿದೆ. ಮರು ನಾಮಕರಣಕ್ಕೆ ಸಂಪುಟದ ಸಮ್ಮತಿ ನೀಡಿದೆ ಎಂಬುದಾಗಿ ಸಚಿವ ಹೆಚ್.ಕೆ ಪಾಟೀಲ್ ತಿಳಿಸಿದರು. ಈ ಬಳಿಕ ಮಾತನಾಡಿದಂತ ಸಚಿವ ಹೆಚ್.ಸಿ ಮಹದೇವಪ್ಪ ಅವರು, ಸದಾಶಿವ ಆಯೋಗದ ವರದಿ ತಿರಸ್ಕಾರಿಸಲಾಗಿತ್ತು. ಹಿಂದೆ ಬಿಜೆಪಿ ಸರ್ಕಾರವೇ ತಿರಸ್ಕರಿಸಿತ್ತು. ಮಾಧುಸ್ವಾಮಿ ನೇತೃತ್ವದ ಕಮಿಟಿ ರಚಿಸಿತ್ತು. ವರದಿಯಲ್ಲಿನ ಹಲವು ಅಂಶಗಳನ್ನ ಬಿಟ್ಟಿದ್ದರು. ಹಾಗಾಗಿ ನಾವು ವರದಿ ಜಾರಿಗೆ ಹೊರಟಿದ್ದೇವೆ ಎಂದರು.

ಪರಿಶಿಷ್ಟರ ಮೇಲೆ ದೌರ್ಜನ್ಯವಾದಾಗ ದೂರು ದಾಖಲು ಮಾಡಲಾಗುವುದು. ಸ್ಥಳೀಯ ಠಾಣೆಗಳಲ್ಲಿ ದೂರು ಸಲ್ಲಿಸಬೇಕು. ಅಲ್ಲಿಂದ ಈ ವಿಶೇಷ ಠಾಣೆಗೆ ವರ್ಗಾವಣೆಯಾಗಲಿದೆ. ಕೂಡಲೇ ಎಫ್ ಐಆರ್ ದಾಖಲಿಸಲು ಅವಕಾಶವಿದೆ ಎಂದರು. ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ ನಮ್ಮದು 30 ವರ್ಷಗಳ ಹೋರಾಟ. ನಾವೆಲ್ಲರೂ ಒಟ್ಟಿಗೆ ಇದ್ದೇವೆ. ಒಟ್ಟಿಗೆ ಮಾಡೋಣ ಎಂಬ ನಿಲುವಿನಲ್ಲಿದ್ದೇವೆ. ಜಾರಿ ಮಾಡಲು ಸರ್ಕಾರ ಬದ್ಧವಾಗಿದೆ. ಸಮಾಜ 30 ವರ್ಷಗಳ ಹೋರಾಟಕ್ಕೆ ನ್ಯಾಯ ಸಿಗ್ತಿದೆ. ಮೂರು ತಿಂಗಳಲ್ಲಿ ವರದಿ ಬರಲಿದೆ. ಬೋವಿ, ಛಲವಾದಿ, ಲಂಬಾಣಿ ಎಲ್ಲವೂ ಒಟ್ಟಿಗೆ ಇವೆ. ಮಾದಿಗ, ಬಂಜಾರ ಎಲ್ಲರು ಒಟ್ಟಿಗಿದ್ದೇವೆ. ಪರಮೇಶ್ವರ್, ಮಹದೇವಪ್ಪ ಎಲ್ಲರು ತೀರ್ಮಾನಕ್ಕೆ ಬಂದಿದ್ದೇವೆ. ಮೂರು ತಿಂಗಳಲ್ಲಿ ಮಾಡಲು ಸಲಹೆ ಕೊಟ್ಟಿದ್ದೇವೆ ಎಂದರು.

## ೩೦ರಂದು ಭ್ರಷ್ಟಾಚಾರದ ವಿರುದ್ಧ ಜಾಗೃತಿ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಇದೇ ಅ.30ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ-2024 ಮತ್ತು ರಾಷ್ಟ್ರದ ಏಳಿಗೆಗಾಗಿ ಸಮಗ್ರತೆಯ ಸಂಸ್ಕೃತಿ ಒಂದು ದಿನದ ಕಾರ್ಯಗಾರ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜಸ್ವ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳು ತಪ್ಪದೇ ಹಾಜರಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಕಂದಾಯ ಇಲಾಖೆಯಿಂದ ಲಿಂಗೇಗೌಡ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯಿತ್‌ರಾಜ್‌ನಿಂದ ಪಿಡಿಒ ಎಂ.ರಾಮಚಂದ್ರಪ್ಪ ಹೆಚ್ಚುಮತಗಳಿಸಿ ಆಯ್ಕೆ

# ಸರ್ಕಾರಿ ನೌಕರರ ಸಂಘದ ಚುನಾವಣೆ ಫಲಿತಾಂಶ

» ಚಳ್ಳಕೆರೆ



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಚಳ್ಳಕೆರೆ ಶಾಖೆಯ 2024-2029ರ ಐದು ವರ್ಷಗಳ ಅವಧಿಗೆ ಚುನಾವಣೆ ಸೋಮವಾರ ನಡೆದು, ಸಂಜೆ ಎಲ್ಲಾ ಎಲ್ಲಾ ಇಲಾಖೆಯ ಏಣಿಕೆ ಕಾರ್ಯವನ್ನು ಪೂರೈಸಿದ ನಂತರ ಚುನಾವಣಾಧಿಕಾರಿ ಶ್ರೀಧರ ಫಲಿತಾಂಶದ ವಿವರವನ್ನು ನೀಡಿದರು.

ರಾಜ್ಯ ಸರ್ಕಾರ ಮತ್ತು ಜನಸಾಮಾನ್ಯರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಸರ್ಕಾರಿ ನೌಕರರೂ ಸಹ ತಮ್ಮ ಸಂಘಟನೆಯನ್ನು ಬಲಪಡಿಸಿಕೊಳ್ಳುವಲ್ಲಿ ಉತ್ಸಾಹದಿಂದಿದ್ದು, ಇಂದು ನಡೆದ ಚುನಾವಣೆಯಲ್ಲಿ ಎಲ್ಲಾ ಇಲಾಖೆಯ ಸರ್ಕಾರಿ ನೌಕರರು ಉತ್ಸಾಹದಿಂದಲೇ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ತಮ್ಮ ಪ್ರತಿನಿಧಿಯನ್ನು ಆಯ್ಕೆ ಮಾಡಿದರು. ಕಳೆದ ಸುಮಾರು ಹತ್ತು ದಿನಗಳಿಂದ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಚುನಾವಣೆಗೆ ಉಮೇದುವಾರರೂ ಸೇರಿದಂತೆ ವಿವಿಧ ಇಲಾಖೆಯ ಸರ್ಕಾರಿ ನೌಕರರು ತಮ್ಮ ಮತದಾನದ ಮೂಲಕ ಐದು ವರ್ಷಗಳ ಅವಧಿಗೆ ತಾಲ್ಲೂಕು ಸಂಘದ ನಿರ್ದೇಶಕರನ್ನು ಆಯ್ಕೆ ಮಾಡಿದ್ದಾರೆ. ಅತಿಹೆಚ್ಚು ಮತ ಇರುವ ಶಿಕ್ಷಕ ಕ್ಷೇತ್ರದ ಏಣಿಕೆ ಕಾರ್ಯಮಾತ್ರ ಇನ್ನೂ ನಡೆಯುತ್ತಿದ್ದು, ಆಕ್ಷೇತ್ರದಿಂದ ಆಯ್ಕೆಯಾದವರ ಬಗ್ಗೆ ಸ್ಪಷ್ಟ ಚಿತ್ರಣಸಿಕ್ಕಿಲ್ಲ.

ಕಂದಾಯ ಇಲಾಖೆಯ ಚುನಾವಣೆಯ ಫಲಿತಾಂಶದ ಮಾಹಿತಿ ಲಭ್ಯವಾಗಿದ್ದು, ಪಿ.ಎಲ್.ಲಿಂಗೇಗೌಡ-65 ಮತಗಳನ್ನು ಪಡೆದು ಆಯ್ಕೆಯಾದರೆ ಎದುರಾಳಿ ಶಿರಸ್ತೇದಾರ್ ಗಿರೀಶ್-23ಮತಗಳನ್ನು ಪಡೆದು ಪರಾಭವಗೊಂಡರು. ಮತ್ತೊಂದು ಕ್ಷೇತ್ರದಲ್ಲಿ ತಳಕು ಗ್ರಾಮ ಆಡಳಿತಾಧಿಕಾರಿ ಎಚ್.ಉಮೇಶ್, ನಾಯಕನಹಟ್ಟಿ ಗ್ರಾಮ ಆಡಳಿತಾಧಿಕಾರಿ ಎಚ್.ಪ್ರದೀಪ್‌ಕುಮಾರ್ ವಿಜಯದ ನಗೆಬೀರಿದಿದ್ದಾರೆ. ಕಸಬಾ ಗ್ರಾಮ ಆಡಳಿತಾಧಿಕಾರಿ ಎಂ.ಪ್ರಕಾಶ್ ಹಾಗೂ ಪ್ರದೀಪ್‌ಕುಮಾರ್ ತಲಾ53 ಮತಗಳನ್ನು ಪಡೆದಿದ್ದು ಡೀಪ್ ಮೂಲಕ ಎಚ್.ಪ್ರದೀಪ್‌ಕುಮಾರ್ ಆಯ್ಕೆಯಾದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್‌ರಾಜ್ ಇಲಾಖೆ 90ಮತಗಳಿದ್ದು, 51 ಮತಗಳನ್ನು ಪಡೆಯುವ ಮೂಲಕ ನಗರಂಗೆರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ರಾಮಚಂದ್ರಪ್ಪ ಆಯ್ಕೆಯಾಗಿದ್ದಾರೆ. ಇವರ ಎದುರಾಳಿ ರಜನಿ, ತಿಮ್ಮರಾಜು, ಗುಂಡಪ್ಪ ಅಲ್ಪಮತಗಳನ್ನು ಪಡೆದು ಪರಾಭವಗೊಂಡಿದ್ದಾರೆ. ಎಂ.ರಾಮಚಂದ್ರಪ್ಪ ಗೆಲುವು ಸಾಧಿಸಿದ ಕೂಡಲೇ ಅಭಿಮಾನಿಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧಗ್ರಾಮದಿಂದ ಆಗಮಿಸಿದ ಗ್ರಾಮದ ಮುಖಂಡರು ಆತ್ಮೀಯವಾಗಿ ಅವರನ್ನು ಅಭಿನಂದಿಸಿದರು. ಆರೋಗ್ಯ ಇಲಾಖೆಯಿಂದ ಕೆ.ಒ.ಮಂಜುನಾಥ, ಬಿ.ಎಚ್.ರಾಜು, ಎಸ್.ಬಿ.ತಿಪ್ಪೇಸ್ವಾಮಿ, ಬಸವರಾಜು ಆಯ್ಕೆಯಾಗಿದ್ದಾರೆ. ಬಿಸಿಎಂನಿಂದ ಮಂಜುನಾಥ, ಪದವಿಪೂರ್ವಕಾಲೇಜು ವಿಭಾಗದಲ್ಲಿ ಎಂ.ಶ್ರೀನಿವಾಸ್, ನ್ಯಾಯಾಂಗ ಇಲಾಖೆ ಬಿ.ಟಿ.ಮಲ್ಲಯ್ಯ, ಪ್ರೌಢಶಾಲಾ ವಿಭಾಗದಿಂದ ಸಿ.ಟಿ.ವೀರೇಶ್, ಅಶೋಕ್‌ಕುಮಾರ್, ತೋಟಗಾರಿಕೆ, ರೇಷ್ಮೆ ಇಲಾಖೆಯಿಂದ ಎಂ.ಶ್ರೀನಿವಾಸ್ ಆಯ್ಕೆಯಾದರು.

**ಅವಿರೋಧ ಆಯ್ಕೆ :** ಕೃಷಿ ಇಲಾಖೆಯಿಂದ ಎಂ.ತಿಪ್ಪೇಸ್ವಾಮಿ, ಪಶು ಇಲಾಖೆಯಿಂದ ಸಿ.ರುದ್ರಮುನಿ, ಲೋಕೋಪಯೋಗಿ ಇಲಾಖೆ ಪಿ.ಬಿ.ಸಿದ್ದಪ್ಪ, ಪಂಚಾಯಿತ್‌ರಾಜ್ ಇಲಾಖೆ-1 ಸಿ.ಜೆ.ಸುರೇಶ್‌ಬಾಬು, ಗ್ರಾಮೀಣಾಭಿವೃದ್ಧಿ ಇಲಾಖೆ ಡಿ.ಕೆ.ಸುರೇಶ್, ಕ್ಷೇತ್ರ ಶಿಕ್ಷಣ ಆಡಳಿತ ಸುವರ್ಣಮ್ಮ, ಸಮಾಜಕಲ್ಯಾಣ ಮತ್ತು ಪರಿಶಿಷ್ಟ ವರ್ಗ ಇಲಾಖೆ-1 ಪಿ.ರಮೇಶ್, ಅರಣ್ಯ ಇಲಾಖೆ ಕೆ.ಅಶೋಕ್‌ಕುಮಾರ್, ಆರೋಗ್ಯ ಇಲಾಖೆ ಬೋರಯ್ಯ, ಖಜಾನೆ ಮತ್ತು ಕಾರ್ಮಿಕ ಇಲಾಖೆ ಬಿ.ಎಂ.ಶ್ವೇತ, ಭೂಮಾಪನ ಬಿ.ಎಸ್.ಬಾಬು, ಪಂಚಾಯಿತ್‌ರಾಜ್‌ನಿಂದ ಎಂ.ಮಂಜುನಾಥ, ಸಿಡಿಪಿಒನಿಂದ ಡಿ.ಎಚ್.ರಜಾಕ್‌ಸಾಬ್, ಮೀನುಗಾರಿಕೆಯಿಂದ ಬಿ.ಸಿ.ಪ್ರಸಾದ್, ಆಹಾರ ಮತ್ತು ಮಾರುಕಟ್ಟೆ ಸಿ.ವೆಂಟಕಲಕ್ಷ್ಮಿ, ಅಬಕಾರಿಯಿಂದ ಪೇದೆ ಸೋಮಶೇಖರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

## ಫಾಸ್ಟ್ ನ್ಯೂಸ್

### ಅಪರಿಚಿತ ಶವ: ಗುರುತು ಪತ್ತೆಗೆ ಮನವಿ

» ಚಿತ್ರದುರ್ಗ

ಚಳ್ಳಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಎರೆಡು ಅಪರಿಚಿತ ಶವ ಪತ್ತೆಯಾಗಿರುವ ಕುರಿತು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಮೊದಲನೆ ಪ್ರಕರಣದಲ್ಲಿ ಅನಾರೋಗ್ಯ ನಿಮಿತ್ತ ಚಳ್ಳಕೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಸುಮಾರು 65 ರಿಂದ 70 ವರ್ಷ ವಯಸ್ಸಿನ ಅನಾಮಧೇಯ ವ್ಯಕ್ತಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿರುತ್ತದೆ. ಆದರೆ ಅನಾಮಧೇಯ ವ್ಯಕ್ತಿಯು ಚಿಕಿತ್ಸೆ ಫಲಕಾರಿಯಾಗಿದೆ ದಿನಾಂಕ 03-08-2024 ರಂದು ರಾತ್ರಿ 10:30 ಗಂಟೆಗೆ ಜಿಲ್ಲಾ ಆಸ್ಪತೆಯಲ್ಲಿ ಮೃತಪಟ್ಟಿರುತ್ತಾರೆ. ಸುಮಾರು 5 ಅಡಿ 4 ಇಂಚು ಎತ್ತರ, ಕೋಲು ಮುಖ, ತೆಳ್ಳನೆಯ ಮೈಕಟ್ಟು, ಬಿಳಿ ಗಡ್ಡ, ಬೋಳು ತಲೆಯ ಅನಾಮಧೇಯ ವ್ಯಕ್ತಿ, ನೀಲ ಬಣ್ಣದ ಟೀಷರ್ಟ್, ಕಪ್ಪು ಬಣ್ಣದ ಬರ್ಮುಡ ಧರಿಸಿರುತ್ತಾರೆ. ಎರೆಡನೇ ಪ್ರಕರಣದಲ್ಲಿ ಚಳ್ಳಕೆರೆ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿರುವ ಕಣಿವೆ ಮಾರಮ್ಮ ದೇವಸ್ಥಾನದ ಬಳಿ ದಿನಾಂಕ 06-10-2024 ರಂದು ಸುಮಾರು 35 ವಯಸ್ಸಿನ ಅನಾಮಧೇಯ ವ್ಯಕ್ತಿ ಕುಡಿದು ಮೃತಪಟ್ಟಿರುತ್ತಾನೆ. ಸುಮಾರು 5 ಅಡಿ 5 ಇಂಚು ಎತ್ತರ, ಕೋಲು ಮುಖ, ಎಣ್ಣೆಗೆಂಪು ಬಣ್ಣ, ಸಾಧಾರಣ ಮೈಕಟ್ಟು, ಕುರುಚುಲು ಗಡ್ಡ, ತಲೆಯಲ್ಲಿ ಕಪ್ಪು ಕೂದಲು ಇರುತ್ತದೆ. ಹಳದಿ ಷರ್ಟ್ ಮತ್ತು ಕೆಂಪು ಡ್ರಾಯರ್, ಹರಿದಿರುವ ನೀಲಿ ಜೀನ್ಸ್ ಪ್ಯಾಂಟ್ ಹಾಕಿರುತ್ತಾನೆ. ಕೊರಳಲ್ಲಿ ಆರ್ಟಿಫಿಷಿಯಲ್ ಚೈನ್ ಆಭರಣ ಧರಿಸಿರುತ್ತಾನೆ. ಮೃತ ವ್ಯಕ್ತಿಗಳ ಗುರುತು ಪತ್ತೆಯಾದರೆ, ಚಳ್ಳಕೆರೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08195-250239, 9480803159-3112, ಉಪಾಧೀಕ್ಷಕರವರ ಕಛೇರಿ ದೂರವಾಣಿ ಸಂಖ್ಯೆ 08195-251010-3121, ಜಿಲ್ಲಾ ನಿಸ್ತಂತು ಕೇಂದ್ರ ದೂರವಾಣಿ ಸಂಖ್ಯೆ 8194-222782ಗೆ ಕರೆ ಮಾಡುವಂತೆ ತಿಳಿಸಿದೆ.

### ಜೀವನ ಪ್ರಮಾಣ ಪತ್ರ ಸಲ್ಲಿಕೆ ನ.1ರಿಂದ ಅಭಿಯಾನ

» ಚಿತ್ರದುರ್ಗ

ನಿವೃತ್ತನೌಕರರುತಮ್ಮಪಿಂಚಣಿಮುಂದುವರೆಯಲು ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ಜೀವನ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆ, ಇಂಡಿಯನ್ ಪೋಸ್ಟ್ ಪೇಮೆಂಟ್ ಬ್ಯಾಂಕ್ ಸಹಯೋಗದಲ್ಲಿ ದೇಶ್ಯಾದ್ಯಂತ ವಿದ್ಯುನ್ಮಾನ ಜೀವನ್ ಪ್ರಮಾಣ ಪತ್ರ ಸಲ್ಲಿಕೆಗೆ ನವೆಂಬರ್ 1 ರಿಂದ 30 ವರೆಗೆ ಅಭಿಯಾನ ಹಮ್ಮಿಕೊಂಡಿದೆ. ನವೆಂಬರ್ ತಿಂಗಳ 6, 14, 20, 27 ಮತ್ತು 30ನೇ ತಾರೀಖಿನಂದು ಚಿತ್ರದುರ್ಗ ಜಿಲ್ಲೆಯ ಪ್ರಧಾನ ಅಂಚೆ ಕಚೇರಿ ಸೇರಿದಂತೆ ಎಲ್ಲಾ ತಾಲ್ಲೂಕು ಅಂಚೆ ಕಚೇರಿಗಳಲ್ಲಿ ಮೇಳ ಹಮ್ಮಿಕೊಳ್ಳಲಾಗಿದೆ. ಇದರ ಸದುಪಯೋಗವನ್ನು ಪಿಂಚಣಿದಾರರು ಪಡೆದುಕೊಳ್ಳಬೇಕು ಎಂದು ಅಂಚೆ ಅಧೀಕ್ಷಕಿ ಉಷಾ.ಕೆ.ಆರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅ.29ರಂದು ದೀಪ ಸಂಜೀವಿನಿ ಕಾರ್ಯಕ್ರಮ

» ಚಿತ್ರದುರ್ಗ

ದೀಪಾವಳಿ ಹಬ್ಬದ ಪ್ರಯುಕ್ತ ಜಿಲ್ಲಾಮಟ್ಟದ "ದೀಪ ಸಂಜೀವಿನಿ" ಕಾರ್ಯಕ್ರಮವನ್ನು ಇದೇ ಅ.29ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ವೃತ್ತದಲ್ಲಿ ಆಯೋಜಿಸಲಾಗಿದೆ. ದೀಪಾವಳಿ ಹಬ್ಬದ ಅಂಗವಾಗಿ ಮಹಿಳೆಯರ ಸ್ವಾವಲಂಬಿ ನಡೆಗಳನ್ನು ಪ್ರೇರೇಪಿಸಲು ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸಿರುವ ಮಣ್ಣಿನ ಹಣತೆಗಳು ಹಾಗೂ ಹಬ್ಬದ ವಿಶೇಷ ತಿಂಡಿ-ತಿನಿಸುಗಳ ಮಳಿಗೆಗಳನ್ನು ತೆರೆದು ದೀಪ ಸಂಜೀವಿನಿ ಕಾರ್ಯಕ್ರಮ ಆಯೋಜಿಸಲಾಗಿದೆ ದೀಪಾವಳಿ ಹಬ್ಬವು ಪ್ರಸಿದ್ಧವಾದ ಹಬ್ಬವಾಗಿದ್ದು, ದೀಪಗಳಿಂದ ದೀಪಗಳನ್ನು ಹಚ್ಚುವ ಹಬ್ಬವೆ ಬೆಳಕಿನ ಹಬ್ಬ ದೀಪಾವಳಿ. ಈ ದೀಪಾವಳಿಯಲ್ಲಿ ನಮ್ಮ ಸ್ವ ಸಹಾಯ ಗುಂಪಿನ ಮಹಿಳೆಯರು ತಮ್ಮ ಕೈಚಳಕ, ಪರಿಶ್ರಮ ಹಾಗೂ ಸೃಜನಶೀಲತೆಯಿಂದ ತಯಾರಿಸಿದ ವಿವಿಧ ವಿನ್ಯಾಸದ ದೀಪಗಳನ್ನು ಬಳಸುವುದರ ಮೂಲಕ ಮಾರುಕಟ್ಟೆ ಒದಗಿಸುವುದು ಹಾಗೂ ಸ್ವದೇಶಿ ಉತ್ಪನ್ನಗಳನ್ನು ಬೆಂಬಲಿಸುವುದರ ಮೂಲಕ ಮಹಿಳೆಯರ ಸ್ವಾವಲಂಬಿ ನಡೆಗಳನ್ನು ಪ್ರೇರೇಪಿಸುವುದಕ್ಕಾಗಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಅ. 28 ರಿಂದ 31 ರವರೆಗೆ ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸುವ ಮಣ್ಣಿನ ಹಣತೆಗಳು ಹಾಗೂ ಹಬ್ಬದ ವಿಶೇಷ ತಿಂಡಿ- ತಿನಿಸುಗಳ ಮಳಿಗೆಗಳನ್ನು ದೀಪಾವಳಿ ಹಬ್ಬದ ಪ್ರಯುಕ್ತ ದೀಪ ಸಂಜೀವಿನಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

### ಅ.29 ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಹಿರಿಯೂರು ಉಪವಿಭಾಗದ ವ್ಯಾಪ್ತಿಯ ಐಮಂಗಲ ಮತ್ತು ಮಲ್ಲಪ್ಪನಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಇದೇ ಅ.29ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಚಿತ್ರದುರ್ಗ 220/66/11 ಕೆವಿ ಎಸ್.ಆರ್.ಎಸ್ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಾಗೂ ಐಮಂಗಳ ಮತ್ತು ಮಲ್ಲಪ್ಪನಹಳ್ಳಿ 66/11 ಕೆ.ವಿ ವಿದ್ಯುತ್ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಇರುವುದರಿಂದ ಅ.29ರಂದು ಬೆಳಿಗ್ಗೆ 10 ರಿಂದ ಸಂಜೆ 4ಗಂಟೆಯವರೆಗೆ ಐಮಂಗಳ ಮತ್ತು ಮಲ್ಲಪ್ಪನಹಳ್ಳಿ ವಿ.ವಿ.ಕೇಂದ್ರಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

# 8.50 ಕೋಟಿ ರೂ.ವೆಚ್ಚದಲ್ಲಿ ಸೇತುವೆಗಳ ಕಾಮಗಾರಿಗೆ ಶಾಸಕರಿಂದ ಭೂಮಿ ಪೂಜೆ



» ಹೊಳಲ್ಕೆರೆ

ಯಾವ ಊರಿಗೆ ಏನು ಕೆಲಸ ಮಾಡಿದರೆ ಜನರಿಗೆ ಒಳ್ಳೆಯದಾಗುತ್ತದೆಂದು ಆಲೋಚನೆ ಮಾಡುವ ರಾಜಕಾರಣಿ ನಾನು ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಇಂಗಳದಹಳ್ಳಿ ಗ್ರಾಮದಲ್ಲಿ ಕೆ.ಎಂ.ಇ.ಆರ್.ಸಿ. ಯೋಜನೆಯಡಿಯಲ್ಲಿ 8.50 ಕೋಟಿ ರೂ.ವೆಚ್ಚದಲ್ಲಿ ಈಚಘಟ್ಟ, ಕಡೂರು, ಅಂದನೂರು, ಗುಂಡೇರಿ ಸೇತುವೆಗಳ ನಿರ್ಮಾಣ ಕಾಮಗಾರಿಗೆ ಸೋಮವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಒಳ್ಳೆ ಕೆಲಸ ಮಾಡಬೇಕೆಂದು ಸಾರ್ವಜನಿಕರ ಬದುಕನ್ನು ನನ್ನ ಸ್ವಂತ ಬದುಕೆಂದು ತಿಳಿದು ಕ್ಷೇತ್ರದ ಅಭಿವೃದ್ಧಿಗೆ ಹಗಲು-ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ. ನೂರಾರು ಕೆರೆ, ಗೋಕಟ್ಟೆ, ಚೆಕ್‌ಡ್ಯಾಂಗಳನ್ನು ಕಟ್ಟಿಸಿರುವುದರಿಂದ ನೀರು ನಿಂತಿದೆ. ರೈತರಿಗೆ ನೀರು ವಿದ್ಯುತ್ ಮುಖ್ಯವಾಗಿರುವುದರಿಂದ ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ರೇಷ್ಮೆ ಇಲಾಖೆಗೆ ಸೇರಿದ ಹತ್ತು ಎಕರೆ ಜಾಗದಲ್ಲಿ 220 ಮೆ.ವ್ಯಾ. ವಿದ್ಯುತ್ ಉತ್ಪಾದಿಸಲು 250 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದೇನೆಂದರು.ಕ್ಷೇತ್ರದ ಜನರಿಗೆ ಉಪಯೋಗವಾಗಬೇಕೆಂದು ಎಲ್ಲಿ ಏನೇನು ಕೆಲಸ ಆಗಬೇಕೆಂಬುದನ್ನು ಯೋಚಿಸುತ್ತಿರುತ್ತೇನೆ. ಸರ್ಕಾರ ಯಾವುದೇ ಇರಲಿ. ಹಣ ತರಲು ಹಿಂದೆ ಮುಂದೆ ನೋಡುವುದಿಲ್ಲ. ಕೋಟ್ಯಾಂತರ ರೂ.ಗಳ ಅನುದಾನ ತರುವ ಶಕ್ತಿಯಿದೆ. ಸರ್ಕಾರಿ ಶಾಲೆಗೆ ಬರುವ ಬಡ ಮಕ್ಕಳಿಗೆ ತೊಂದರೆಯಾಗಬಾರದೆಂದು ಉಚಿತ ಬಸ್‌ಗಳ ಸೇವೆ ಒದಗಿಸಿದ್ದೇನೆ. ರಾಜ್ಯದಲ್ಲಿ ಯಾವ ಶಾಸಕನು ಸ್ವಂತ ಖರ್ಚಿನಿಂದ ಸರ್ಕಾರಿ ಶಾಲೆಯ ಮಕ್ಕಳಿಗೆ ಬಸ್ ವ್ಯವಸ್ಥೆ ಕಲ್ಪಿಸಿಲ್ಲ. ಏಳುವರೆ ಮೀ. ಸೇತುವೆ ಬೇಡ. ಒಂಬತ್ತು ಮೀ.ನಷ್ಟು ಅಗಲವಾದ ಸೇತುವೆ ನಿರ್ಮಿಸುವಂತೆ ಸಂಬಂಧಪಟ್ಟ ಇಂಜಿನಿಯರ್ ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

ಬಿಜೆಪಿ.ಮಂಡಲ ಅಧ್ಯಕ್ಷ ಸಿದ್ದೇಶ್, ಚಿಕ್ಕಜಾಜೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಡಿ.ಸಿ.ಮೋಹನ್, ಸದಸ್ಯರಾದ ಗಂಗಣ್ಣ, ರಮೇಶಣ್ಣ, ರುದ್ರಪ್ಪ, ಪರಮೇಶ್ವರಪ್ಪ

ಪ್ರಕಾಶ್, ಗುತ್ತಿಗೆದಾರ ನಾರಾಯಣ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪಾಲಿ ಫೆಸ್ಟ್ ಉತ್ಸವ-2024ಕ್ಕೆ ಚಾಲನೆ



» ಚಿತ್ರದುರ್ಗ

ಬೌದ್ಧಿಕ ಹಾಗೂ ಮಾನಸಿಕ ಬೆಳವಣಿಗೆಗೆ ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳು ಪ್ರೇರಕವಾಗಿರುತ್ತವೆ. ಶಾಲಾ-ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳಿಗೆ ಸಂಬಂಧಿಸಿದವರು ಕಲೆ, ಕ್ರೀಡೆ , ಸಾಂಸ್ಕೃತಿಕ ಸೇರಿದಂತೆ ಮತ್ತಿತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಪ್ರೋತ್ಸಾಹ ನೀಡುವುದು ಅತಿ ಮುಖ್ಯ ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್‌ಜೆಎಂ ವಿದ್ಯಾಪೀಠ ಆಡಳಿತ ಮಂಡಳಿ ಸದಸ್ಯರಾದ ಡಾ.ಬಸವಕುಮಾರ ಬಸವಕುಮಾರ ಸ್ವಾಮೀಜಿ ಅವರು ಕರೆ ನೀಡಿದರು.

ಶ್ರೀಗಳವರು ಇಂದು ನಗರದ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಪಾಲಿಟೆಕ್ನಿಕ್ ವತಿಯಿಂದ ಪಾಲಿಫೆಸ್ಟ್ ಉತ್ಸವ-2024ರ ಅಂಗವಾಗಿ ಇಲ್ಲಿನ ಶ್ರೀ ಜಗದ್ಗುರು ಶ್ರೀ ಮಲ್ಲಿಕಾರ್ಜುನ ಮುರುಘರಾಜೇಂದ್ರ ತಾಂತ್ರಿಕ ಮಹಾವಿದ್ಯಾಲಯದ ಕ್ರೀಡಾಂಗಣದಲ್ಲಿ ವಿದ್ಯಾರ್ಥಿ ಹಾಗೂ ಸಿಬ್ಬಂದಿ ವರ್ಗದವರಿಗಾಗಿ ಏರ್ಪಡಿಸಿರುವ ಎರಡು ದಿನಗಳ ವಿವಿಧ ಕ್ರೀಡೆ ಹಾಗೂ ಸಾಂಸ್ಕೃತಿಕ ಉತ್ಸವಕ್ಕೆ ಸ್ವತಃ ಫೀಲ್ಡ್ ಗೆ ಇಳಿದು ಬ್ಯಾಟ್ ಹಿಡಿದು, ಬಂದ ಬಾಲನ್ನು ಎತ್ತಿ ಕ್ರೀಡಾಂಗಣದ ಮುಂಚೂಣಿಗೆ ತಳ್ಳುವ ಮುಖಾಂತರ ಉದ್ಘಾಟಿಸಿ ಕ್ರೀಡಾಸಕ್ತರಿಗೆ ಹುರಿದುಂಬಿಸಿದರು,

ಹಾಗೆಯೇ ಬೋಲಿಂಗ್ ಕೂಡ ಮಾಡಿ ಹುರುಪು ನೀಡಿದ ಅವರು ಹಲವರಲ್ಲಿ ಹಲವಾರು ವಿಧದ ಅಭಿರುಚಿ ಹವ್ಯಾಸಗಳಿರುತ್ತವೆ. ಅವುಗಳನ್ನು ವಿದ್ಯಾರ್ಥಿಗಳಲ್ಲಿ ಹೊರತೆಗೆಯುವ ಪ್ರಯತ್ನ ಶಿಕ್ಷಣ ಸಂಸ್ಥೆಗಳಿಂದ ಆದಾಗ ಅಲ್ಲಿ ಅನೇಕ ಪ್ರತಿಭೆಗಳು ಹೊರ ಹೊಮ್ಮಲು ಸಾಧ್ಯವಾಗುತ್ತದೆ.

ಅದಕ್ಕೆ ಪೂರಕ ವಾತಾವರಣ ಅಗತ್ಯ. ಓದಿನ ಜೊತೆಗೆ ಜೊತೆಗೆ ಇತರ ಎಲ್ಲ ರೀತಿಯ ಪಠ್ಯೇತರ ಚಟುವಟಿಕೆಗಳು ಘನ ವ್ಯಕ್ತಿತ್ವವನ್ನು ರೂಪಿಸಲಿಕ್ಕೆ ಸಹಕಾರಿಯಾಗುತ್ತವೆ ಎಂದು ಕಿವಿಮಾತು ಹೇಳಿದರು.

ಜಗದ್ಗುರು ಶ್ರೀಮಲ್ಲಿಕಾರ್ಜುನ ಮುರುಘರಾಜೇಂದ್ರ ತಾಂತ್ರಿಕ ಮಹಾವಿದ್ಯಾಲಯದ ಪ್ರಾಚಾರ್ಯರಾದ ಭರತ್, ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಫಾರ್ಮಸಿಯ ಪ್ರಾಚಾರ್ಯರಾದ ನಾಗರಾಜ್, ದೈಹಿಕ ನಿರ್ದೇಶಕರಾದ ಕುಮಾರಸ್ವಾಮಿ ಪಾಲಿಟೆಕ್ನಿಕ್ ನ ವಿವಿಧ ವಿಭಾಗಗಳ ಮುಖ್ಯಸ್ಥರುಗಳಾದ ಪಿ.ಬಿ ರಾಜೇಶ್ ,ನಳಿನಾಕ್ಷಿ , ಎಸ್ ಮೋಹನ್ ಕುಮಾರ್ ಪಿ.ಎ .ರಘು ಹಾಗೂ ಪಾಲಿಟೆಕ್ನಿಕ್‌ನ ಬೋಧಕರು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರಾಚಾರ್ಯರದ ಎಸ್ .ವಿ .ರವಿಶಂಕರ್ ಸ್ವಾಗತಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದರು.

## ಅ.29ರಂದು 9ನೇ ಆಯುರ್ವೇದ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಧನ್ವಂತರಿ ಜಯಂತಿ ಅಂಗವಾಗಿ 9ನೇ ಆಯುರ್ವೇದ ದಿನಾಚರಣೆಯನ್ನು ಇದೇ ಅ.29ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರಸಭೆ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಸಂಸದ ಗೋವಿಂದ ಎಂ.ಕಾರಜೋಳ ಘನ ಉಪಸ್ಥಿತಿವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಹೊಸದುರ್ಗ ಶಾಸಕ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕ ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಶಾಸಕರಾದ ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಅಧ್ಯಕ್ಷ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ, ಅಮೃತ ಆಯುರ್ವೇದ

## ಮಾಸಿಕ ಗಮಕ: ಬಕಲ್ಭ್ಯಾ ಮುನಿ ಪ್ರಸಂಗ




» ಚಿತ್ರದುರ್ಗ

ಗಮಕ ಕಲಾಭಿಮಾನಿಗಳ ಸಂಘದ 40ನೇ ವರ್ಷದ ವಾರ್ಷಿಕೋತ್ಸವದ ಸವಿನೆನಪಿಗಾಗಿ ನಡೆಸುತ್ತಿರುವ ಮಾಸಿಕ ಗಮಕ ಕಾರ್ಯಕ್ರಮದ 15ನೇ ಸಮಾರಂಭವು ದಿನಾಂಕ 27 -10-2024ನೇ ಭಾನುವಾರ ಸಂಜೆ ನಗರದ ಜೆಸಿಆರ್ ಬಡಾವಣೆಯ ಗಣಪತಿ ದೇವಾಲಯದಲ್ಲಿ ನಡೆಯಿತು. ಕಾರ್ಯಕ್ರಮದ ಅಂಗವಾಗಿ ಲಕ್ಷ್ಮೀಶ ಕವಿಯ ಜೆಮಿನಿ ಭಾರತದ ಬಕಲ್ಭ್ಯ ಮುನಿಯ ಪ್ರಸಂಗದ ವಾಚನ ವ್ಯಾಖ್ಯಾನ ನಡೆಯಿತು.

ಬೆಂಗಳೂರಿನ ಖ್ಯಾತ ಗಮಕಿ ಎಂ.ಆರ್. ಸತ್ಯನಾರಾಯಣ ಅವರ ವಾಚನಕ್ಕೆ, ವ್ಯಾಖ್ಯಾನ ವಿದ್ವಾನ್ ಟಿ. ಸುಬ್ರಹ್ಮಣ್ಯಭಟ್ ವ್ಯಾಖ್ಯಾನ ನೀಡಿದರು. ಪಾಂಡವರ ರಾಜಸೂಯ ಯಾಗದ ಸಂದರ್ಭದಲ್ಲಿ ಅವರ ಯಜ್ಞದ ಕುದುರೆಯು ಮೇಯುತ್ತಿರುವುದನ್ನು ಕಂಡ ಕೃಷ್ಣ ಸಹಿತ ಪಾಂಡವರು ಬಕಲ್ಭ್ಯ ಮುನಿಯನ್ನು ನೀವು ಯಾರು? ನಿಮಗೆ ಎಷ್ಟು ವರ್ಷ? ನೀವು ಏನು ಮಾಡುತ್ತಿರುವಿರಿ? ಎಂದು ಕೇಳಿದಾಗ ,ಆತ ತಾನು ಅನೇಕ ಬ್ರಹ್ಮರ ಕಾಲದಿಂದ ತಲೆಯ ಮೇಲೆ ಒಂದು ರಂದ್ರಯುಕ್ತ ತರಗೆಲೆಯನ್ನು ತಲೆಯ ಮೇಲಿಟ್ಟುಕೊಂಡು ಶ್ರೀ ಕೃಷ್ಣನ ದರ್ಶನಕ್ಕಾಗಿ ತಪಸ್ಸು ಮಾಡುತ್ತಿರುವುದಾಗಿಯೂ ಈಗ ಅನಾಯಾಸವಾಗಿ ಬಂದೊದಗಿದ ಕೃಷ್ಣನ ದರ್ಶನದಿಂದ ತನ್ನ ತಪಸ್ಸು ಫಲಿಸಿತೆಂದು, ತನ್ನ ಜನ್ಮ ಸಾರ್ಥಕವಾಯಿತು ಎಂದು ತಿಳಿಸುವ.. ಪಾಂಡವರು ಆ ಮುನಿಯನ್ನು ವೈಭವದಿಂದ ರಾಜಸೂಯ ಯಾಗದ ಜಾಗಕ್ಕೆ ಬರಮಾಡಿಕೊಂಡ ಕಥಾ ಭಾಗವನ್ನು ಗಮಕಿಗಳು ವಾಚನ ಮತ್ತು ವ್ಯಾಖ್ಯಾನದ ಮೂಲಕ ಶ್ರೋತೃಗಳಿಗೆ ಮನಗಾಣಿಸಿದರು.

ಮಾರುತಿ ಭಜನಾ ಮಂಡಳಿಯವರ ಪ್ರಾರ್ಥನೆಯಲ್ಲಿ ಆರಂಭವಾದ ಸಭೆಯನ್ನು ರಂಗಕರ್ಮಿ ಕೆ.ಪಿ.ಎಂ. ಗಣೇಶಯ್ಯ ಹಯವದನ ನಾಟಕದ ಗಿರೀಶ್ ಕಾರ್ನಾಡರು ರಚಿಸಿ, ಬಿ.ವಿ. ಕಾರಂತರು ಸಂಗೀತ ನಿರ್ದೇಶಿಸಿದ ಗಜವದನ ಹೇ ರಂಭಾ ಎಂಬ ರಂಗ ಗೀತೆಯ ಗಾಯನದೊಂದಿಗೆ ಉದ್ಘಾಟಿಸಿದರು. ಸಂಘದ ಉಪಾಧ್ಯಕ್ಷ ಅನಂತ ಕೃಷ್ಣ ಸರ್ವರನ್ನು ಸ್ವಾಗತಿಸಿದರು. ಬಿ .ಎಲ್ .ಉಮಾ ವಂದಿಸಿದರು. ಶಶಿಧರ್ ಶ್ಯಾನುಭೋಗ್ ಕಾರ್ಯಕ್ರಮ ನಿರ್ವಹಿಸಿದರು.ಗಮಕ ಕಲಾಭಿಮಾನಿಗಳ ಸಂಘದ ಅಧ್ಯಕ್ಷೆ ಶ್ರೀಮತಿ ರಮಾದೇವಿ ಕೆ ವೆಂಕಣ್ಣಾಚಾರ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿ, ರಾಮಾಯಣವು ನಾವು ಹೇಗಿರಬೇಕೆಂಬುದನ್ನು, ಮಹಾಭಾರತವು ಹೇಗಿರಬಾರದು ಎಂಬುದನ್ನು, ಭಗವದ್ಗೀತೆಯು ಹೇಗೆ ಜೀವಿಸಬೇಕು ಎಂಬುದನ್ನು ಸೂಚ್ಯವಾಗಿ ತಿಳಿಸಿದರೆ.

## ಕಡ್ಲೆಗುದ್ದು ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ, ಮದಕರಿನಾಯಕ ಜಯಂತಿ



» ಚಿತ್ರದುರ್ಗ

ತಾಲ್ಲೂಕಿನ ಕಡ್ಲೆಗುದ್ದು ಗ್ರಾಮದಲ್ಲಿ ಸೋಮವಾರ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ರಾಜಾವೀರ ಮದಕರಿನಾಯಕ ಜಯಂತೋತ್ಸವ ಕಾರ್ಯಕ್ರಮ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬಿಜೆಪಿ ಯುವ ಮುಖಂಡರಾದ ಜಿ.ಎಸ್. ಅನಿತ್‌ಕುಮಾರ್ ರಾಮಾಯಣವನ್ನು ಬರೆದ ವಾಲ್ಮೀಕಿ ನಮಗೆಲ್ಲರಿಗೂ ಆದರ್ಶವಾಗಿದ್ದಾರೆ, ಅವರು ಬರೆದ ರಾಮಾಯಣ ನಮ್ಮ ಬದುಕಿಗೆ ದಾರಿದೀಪವಾಗಿದೆ, ಇದೇ ರೀತಿ ನಮ್ಮನ್ನಾಳಿದ ರಾಜ ವೀರ ಮದಕರಿ ನಾಯಕ ಧೈರ್ಯಕ್ಕೆ ಹೆಸರಾಗಿದ್ದಾರೆ, ಮದವನ್ನು ಎರಿದ ಆನೆಯ ಮದವನ್ನು ಅಡಗಿಸುವುದರ ಮೂಲಕ ತಮ್ಮ ಶೌರ್ಯವನ್ನು ಪ್ರದರ್ಶನ ಮಾಡುವುದರ ಮೂಲಕ ಉತ್ತಮವಾದ ಆಳ್ವಿಕೆಯನ್ನು ನೀಡಿದರು. ಇದೇ ಸಂದರ್ಭದಲ್ಲಿ ಕಡ್ಲೇಗುದ್ದು ಗ್ರಾಮದಲ್ಲಿ ಪಾದಯಾತ್ರೆಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ತಿಪ್ಪೇಸ್ವಾಮಿ , ಮಾಜಿ ಸದಸ್ಯರಾದ ಮಧು, ಹಿರಿಯರಾದ ಮುತ್ತಣ್ಣ ಸ್ವಾಮಿ, ಹರೀಶ್,ಓಬಳೇಶ್,ಮಾರುತಿ ಹಾಗು ಅನೇಕ ಯುವ ಮಿತ್ರರು ಗ್ರಾಮಸ್ಥರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಖಾದಿ ಬಟ್ಟೆ ಹಾಗೂ ಉತ್ಪನ್ನಗಳಿಗೆ ಉತ್ತೇಜನ ನೀಡಿ: ಚೌಳೂರು ಬಸವರಾಜು

» ಪರಶುರಾಂಪುರ

ಮಹಾತ್ಮಾ ಗಾಂಧಿಗೆ ಬಹುಪ್ರಿಯವಾದ ಖಾದಿ ಬಟ್ಟೆ ಹಾಗೂ ಅದರ ಉತ್ಪನ್ನಗಳನ್ನು ಇಂದಿನ ಯುವ ಪೀಳಿಗೆ ಹೆಚ್ಚಿನ ರೀತಿಯಲ್ಲಿ ಉಪಯೋಗಿಸಲು ಅವಶ್ಯ ಕತೆ ಇದೆ ಎಂದು ಚೌಳೂರು ಉಣ್ಣೆ ಕೈಮಗ್ಗದ ಕಾರ್ಯದರ್ಶಿ ಬಸವರಾಜು ತಿಳಿಸಿದರು.

ಗ್ರಾಮದ ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರ ಕೆವಿಐಸಿ ಹಾಗೂ ಕೆವಿಐಬಿ ಸಹಯೋಗದಡಿಯಲ್ಲಿ ರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಚೌಳೂರು ಉಣ್ಣೆ ಕೈಮಗ್ಗದ ನೇಕಾರರ ಸಂಘ, ಚೌಳೂರು ಮಾರುತಿ , ರಂಗವ್ವನಹಳ್ಳಿ ಸುಮನ್ ,ನೇರಲಗುಂಟೆ ಜಗಜ್ಯೋತಿ ,ಗರ್ಲಕಟ್ಟೆ ಶರಾವತಿ ಖಾದಿ ಗ್ರಾಮೋದ್ಯೋಗ ಅಸೋಸಿಯೇಷನ್, ಗರ್ಲಕಟ್ಟೆ ಉಣ್ಣೆ ಕೈಮಗ್ಗದ ನೇಕಾರರ ಸಹಕಾರ ಸಹಕಾರದೊಂದಿಗೆ 2024-25ನೇ ಸಾಲಿನ ಖಾದಿ ಉತ್ಸವ ಹಾಗೂ ವಸ್ತು ಪ್ರರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದರು.ಖಾದಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ಖಾದಿಗೆ ಉತ್ತೇಜನ ನೀಡಬೇಕು ಎಂದು ಸರ್ವಜನಿಕರಿಗೆ ಕರೆ ನೀಡಿದರು.




ಸರ್ವೋದಯ ಶಿಕ್ಷಣ ಸಂಸ್ಥೆಯ ಕರ್ತೃ ಚೆನ್ನಕೇಶವ ಮಾತನಾಡಿ , ಖಾದಿ ಉತ್ಪನ್ನಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಬಳಕೆಯೊಂದಿಗೆ ಅದರ ಯೋಜನೆಯಡಿ ಉಪಯೋಗ ಪಡೆಯಬಹುದು ಎಂದರು. ಇದರ ಅಂಗವಾಗಿ ಚಳ್ಳಕೆರೆಯ ಕಂಬಳಿ ಮಾರುಕಟ್ಟೆಯಲ್ಲಿ ಒಂದು ದಿನದ ಖಾದಿ ವಸ್ತು ಪ್ರರ್ಶನ ಜತೆ ಖಾದಿ ಯಾತ್ರೆಯನ್ನ ಆಯೋಜಿಸಲಾಗಿತ್ತು.ಈ ವೇಳೆಯಲ್ಲಿ ಕಾರ್ಯದರ್ಶಿ ಬಸವರಾಜು, ಶಿಕ್ಷಣ ಸಂಸ್ಥೆಯ ಚೆನ್ನಕೇಶವ, ಶಾಂತಕುಮಾರ್, ಶ್ರೀಶೈಲ ಮರ್ತಿ, ಅಶ್ವಿನಿ, ಹರೀಶ್ ಯಾದವ್, ಮಂಜುನಾಥ್, ವೀರಭದ್ರಪ್ಪ,ವಿರೇಶ್ ಕುಮಾರ್, ಶಿವಶಂಕರ್, ಸಿದ್ದೇಶ್, ವಸಂತ, ನವೀನ್,ಚನ್ನಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



# ಅಂಬೇಡ್ಕರ್ ಗಾಂಧಿ

## ಶತ್ರುಗಳೇ–ಮಿತ್ರರೇ....

### ಉದಾಹರಣೆ ಮತ್ತು ಎಚ್ಚರಿಕೆ......

ಭಾರತೀಯ ಸಮಾಜದಲ್ಲಿ ಅಸ್ಪೃಶ್ಯತೆ, ಜಾತಿ ಪದ್ಧತಿಯ ನಿರ್ಮೂಲನೆಯಾಗಿ ಸಮ ಸಮಾಜ ನಿರ್ಮಾಣವಾಗಬೇಕೆಂಬುದು ಎಷ್ಟು ಮುಖ್ಯವೋ, ಸುಮಾರು ನೂರು ವರ್ಷಗಳ ಹಿಂದೆ ಭಾರತದ ಸ್ವಾತಂತ್ರ್ಯ ಗಳಿಸುವುದು ಸಹ ಅಷ್ಟೇ ಮುಖ್ಯವಾಗಿತ್ತು ಎಂದು ಭಾವಿಸುವವರಿಗೆ ಅಂಬೇಡ್ಕರ್ ಮತ್ತು ಗಾಂಧಿ ಇಬ್ಬರು ಮಹತ್ವದ ವ್ಯಕ್ತಿಗಳಾಗಿ ಕಾಣುತ್ತಾರೆ...

ಹಾಗೆಯೇ ಸಂವಿಧಾನಾತ್ಮಕ ಪ್ರಜಾಪ್ರಭುತ್ವವನ್ನು ಉಳಿಸುವ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸುವ ಮನಸ್ಸಿರುವವರಿಗೆ ಗಾಂಧಿ ಮತ್ತು ಅಂಬೇಡ್ಕರ್ ಆದರ್ಶಗಳಾಗಿಯೇ ಕಾಣುತ್ತಾರೆ.......

ವೈಯಕ್ತಿಕಸ್ವಾರ್ಥದ,ದ್ವೇಷಭಾವನೆಯ,ಇತಿಹಾಸದ ಸಂಘರ್ಷವನ್ನು ಈಗಲೂ ಜೀವಂತವಿಡುವ ಮನೋಭಾವದ ಕೆಲವರಿಗೆ ಅಂಬೇಡ್ಕರ್ – ಗಾಂಧಿ ಅಜನ್ಮ ಶತ್ರುಗಳ ರೀತಿಯೇ ಕಾಣುತ್ತಾರೆ......

ವರ್ಣಾಶ್ರಮ ವ್ಯವಸ್ಥೆಯ ಆಚರಣೆ ಆಳವಾಗಿ ಬೇರೂರಿದ್ದ 1869 ರಲ್ಲಿ ಗುಜರಾತಿನ ಅತ್ಯಂತ ಮೇಲ್ವರ್ಗದ ಬನಿಯಾ ಜಾತಿಯಲ್ಲಿ ಗಾಂಧಿ ಹುಟ್ಟಿದರೆ, ಮುಟ್ಟಿಸಿಕೊಳ್ಳದ ಊರ ಹೊರಗಿನ ಅಸ್ಪೃಶ್ಯ ಮಹರ್ ಜಾತಿಯಲ್ಲಿ 1891 ರಲ್ಲಿ ಅಂಬೇಡ್ಕರ್ ಜನಿಸುತ್ತಾರೆ. ಈಗ ಯೋಚಿಸಿ ನೋಡಿ ಯಾರ ಮನಸ್ಥಿತಿ, ಯಾರ ಪರಿಸ್ಥಿತಿ, ಯಾರ ಆಧ್ಯತೆ ಏನೇನಾಗಿರಬಹುದು ಎಂದು....

ಸಹಜವಾಗಿಯೇ ಗಾಂಧಿಗೆ ಭಾರತದ ಸ್ವಾತಂತ್ರ್ಯ ವಿಮೋಚನೆ ಬಹಳ ಮುಖ್ಯವಾದರೆ, ಅಂಬೇಡ್ಕರ್ ಅವರಿಗೆ ದಲಿತ ವಿಮೋಚನೆ ಅತ್ಯಂತ ಪ್ರಮುಖವಾಗುತ್ತದೆ. ಅದೃಷ್ಟವೋ, ದುರಾದೃಷ್ಟವೋ ಆ ಕಾಲಘಟ್ಟದಲ್ಲಿ ಇಬ್ಬರು ದೇಶದ – ವಿಶ್ವದ ಮಹೋನ್ನತ ಚಿಂತಕರು – ಹೋರಾಟಗಾರರು ಪರಸ್ಪರ ಮುಖಾಮುಖಿಯಾಬೇಕಾಗುತ್ತದೆ. ಆಗ ಸಹಜವಾಗಿ ವಿಚಾರ ಸಂಘರ್ಷವು ಏರ್ಪಡುತ್ತದೆ. ಅದನ್ನು ವಿಮರ್ಶಿಸುವ, ಅರಿಯುವ, ಅಳವಡಿಸಿಕೊಳ್ಳುವ, ತಿರಸ್ಕರಿಸುವ, ವಿರೋಧಿಸುವ ಎಲ್ಲಾ ಸಾಧ್ಯತೆಗಳ ಅದೃಷ್ಟಶಾಲಿಗಳು ನಾವಾಗಿದ್ದೇವೆ. ಆದರೆ ಕೆಲವೇ ಕೆಲವು ಜನರು ಮಾತ್ರ ಅತಿರೇಕದ ವಿಚಾರಗಳಿಗೆ ಮರುಳಾಗಿ ಒಬ್ಬರಿಗೊಬ್ಬರು ದ್ವೇಷಿಸುವ ವಾತಾವರಣಕ್ಕೆ ನೀರೆರೆಯುತ್ತಿದ್ದಾರೆ......

ಹೌದು,ಗಾಂಧಿಯವರನ್ನುದಲಿತಸಮುದಾಯಗಳು ವಿರೋಧಿಸಲು ಸಾಕಷ್ಟು ಕಾರಣಗಳು ಸಿಗುತ್ತವೆ ಎಂಬುದು ನಿಜ. ಗಾಂಧಿ ಪ್ರಾರಂಭದ ಹಂತದಲ್ಲಿ ಸನಾತನ ಧರ್ಮದ ಮೂಲ ಬೇರಾದ ವರ್ಣಾಶ್ರಮ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದರು. ಅದರ ಆಚರಣೆಯನ್ನು ಪ್ರತಿಪಾದಿಸುತ್ತಿದ್ದರು. ಆದರೆ ಅಂಬೇಡ್ಕರ್ ಅವರ ಅಧ್ಯಯನ, ಹೋರಾಟ ಮತ್ತು ಭಾರತದ ಸಾಮಾಜಿಕ ಮತ್ತು ರಾಜಕೀಯ ಹೋರಾಟದ ಫಲವಾಗಿ ಗಾಂಧಿಯವರಿಗೆ ಜಾತಿ ಪದ್ದತಿಯ ಕರಾಳ ಮುಖದ ಪರಿಚಯವಾಗುತ್ತದೆ. ಆಗ ಅವರು ಪರಿವರ್ತನೆ ಹೊಂದಿ ಊರ ಹೊರಗೆ ಮುಟ್ಟಿಸಿಕೊಳ್ಳದ ಸಮುದಾಯಗಳ ಬಗ್ಗೆ ಸಾಕಷ್ಟು ಕಾಳಜಿ ವಹಿಸುತ್ತಾರೆ. ಅಂಬೇಡ್ಕರ್ ಅವರಷ್ಟು ಆಳವಾಗಿ ಮತ್ತು ಮನಃಪೂರ್ವಕವಾಗಿ ಅಲ್ಲದಿದ್ದರು ಕನಿಷ್ಠ ಪ್ರಜ್ಞಾಪೂರ್ವಕವಾಗಿ ಆ ಬಗ್ಗೆ ಮಾತನಾಡುತ್ತಾರೆ ಮತ್ತು ಸುಧಾರಣೆಗೆ ಪ್ರಯತ್ನಿಸುತ್ತಾರೆ. ಅದನ್ನು ಗಮನಿಸಬೇಕು.... ..

ಅಸ್ಪೃಶ್ಯ ಸಮುದಾಯಗಳನ್ನು ಕನಿಷ್ಠ ಸ್ಪೃಶ್ಯ ಮಾಡುವ ಆಲೋಚನೆಯಿಂದ ಅವರನ್ನು ಹರಿಜನ ಅಂದರೆ ದೇವರ ಮಕ್ಕಳು ಎಂದು ಕರೆದು ಜನರಲ್ಲಿರು ದೇವರ ಬಗೆಗಿನ ಭಕ್ತಿಯನ್ನು ಉಪಯೋಗಿಸಿಕೊಂಡು ಅವರನ್ನು ಸಮಾಜದ ಸಹ್ಯ ಸಮುದಾಯವಾಗಿ ಮಾಡಲು ಒಂದು ಹಂತದಲ್ಲಿ ಸಣ್ಣದಾಗಿ ಪ್ರಯತ್ನಿಸುತ್ತಾರೆ......

ಅತ್ಯಂತ ಪ್ರಮುಖವಾಗಿ ಕೆಲವು ವೈಚಾರಿಕ ಉಗ್ರ ದಲಿತ ನಾಯಕರು ಮತ್ತು ಚಿಂತಕರಿಗೆ ಗಾಂಧಿಯವರ ಬಗ್ಗೆ ಈಗಲೂ ದ್ವೇಷ ಈ ಮಟ್ಟದಲ್ಲಿ ಉಳಿಯಲು ಕಾರಣ "ಪೂನ ಒಪ್ಪಂದಕ್ಕೆ "ಗಾಂಧಿಯವರು ತೋರಿದ ಅತ್ಯುಗ್ರ ಉಪವಾಸದ ವಿರೋಧ ಮತ್ತು ಅದರಲ್ಲಿ ಅವರು ಯಶಸ್ವಿಯಾಗಿದ್ದು, ಅದಕ್ಕೆ ಅಂಬೇಡ್ಕರ್ ಅವರು ತೋರಿದ ಪ್ರತಿರೋಧ – ಹತಾಶೆ ಮತ್ತು ಆ ನಂತರ ಅವರ ಪ್ರತಿಕ್ರಿಯೆಗಳು ಕಟ್ಟಾ ದಲಿತರಲ್ಲಿ ಗಾಂಧಿಯವರನ್ನು ವಿರೋಧ ಮೀರಿ ದ್ವೇಷಿಸಲು ಕಾರಣವಾಗಿದೆ....

ಹೌದು, ಅಸ್ಪೃಶ್ಯತಾ ನಿವಾರಣೆ, ದಲಿತ ರಕ್ಷಣೆ ಮತ್ತು ಸಬಲೀಕರಣ, ದಲಿತ ಅಸ್ಮಿತೆಯ ಜಾಗೃತಿ, ಶತಮಾನಗಳ ಶೋಷಣೆಗೆ ಒಂದಷ್ಟು ಶಾಶ್ವತ ಪರಿಹಾರ ಮತ್ತು ಒಟ್ಟಾರೆ ದಲಿತ ಅಭ್ಯುದಯದ ದೃಷ್ಟಿಯಿಂದ "ಪೂನಾ ಮೀಸಲಾತಿ ಒಪ್ಪಂದ "ಅತ್ಯಂತ ಮಹತ್ವದ್ದು. ಈಗಿನ ಸಂದರ್ಭದಲ್ಲಿ ಯೋಚಿಸಿದರೆ ಅದು ಆಗ ಜಾರಿಯಾಗಿದ್ದರೆ ದಲಿತರ ಪರಿಸ್ಥಿತಿ ಈಗ ಇರುವುದಕ್ಕಿಂತ ಉತ್ತಮ ಮಟ್ಟದಲ್ಲಿ ಇರುತ್ತಿತ್ತು ಎಂದು ಖಂಡಿತ ಭಾವಿಸಬಹುದು. ಅದನ್ನು ಅಂದು ಅತ್ಯಂತ ಪ್ರಬಲವಾಗಿ ವಿರೋಧಿಸಿದ ಗಾಂಧಿ ದಲಿತ ಸಮುದಾಯಗಳ ಕೋಪಕ್ಕೆ ಅರ್ಹರು ಎಂಬುದು ಸಹ ಅಷ್ಟೇ ನಿಜ. ಆದರೆ......

ಆದರೆ ಗಾಂಧಿಯ ಒಟ್ಟು ಬದುಕನ್ನು, ಹೋರಾಟವನ್ನು ವ್ಯಕ್ತಿತ್ವವನ್ನು, ಆಗಿನ ಕಾಲಘಟ್ಟದ ಪರಿಸ್ಥಿತಿಯನ್ನು ಅವಲೋಕಿಸಿದರೆ ಅವರು ಆ ಒಂದು ವಿಷಯದಲ್ಲಿ ದಲಿತರ ಕ್ಷಮೆಗೆ ಅರ್ಹರು. ಏಕೆಂದರೆ ಅವರ ಆಗಿನ ಉದ್ದೇಶ ಸೂಕ್ಷ್ಮವಾಗಿ ಪರಿಶೀಲಿಸಿದರೆ ಸನಾತನ ಧರ್ಮದ ರಕ್ಷಣೆ ಮತ್ತು ಸ್ವಾತಂತ್ರ್ಯ ಪಡೆಯಲು ಒಗ್ಗಟ್ಟನ್ನು ಕಾಪಾಡುವುದು ಮುಖ್ಯವಾಗಿತ್ತೇ ಹೊರತು ದಲಿತರನ್ನು ಕೆಳ ಹಂತದಲ್ಲಿಯೇ ಉಳಿಸಿ ಅವರನ್ನು ಶೋಷಿಸುವುದಲ್ಲ ಮತ್ತು ಅವರಿಗೆ ಅನ್ಯಾಯ ಮಾಡುವುದಲ್ಲ. ಖಂಡಿತ ಗಾಂಧಿ ಅಷ್ಟೊಂದು ಪ್ರಜ್ಞಾಪೂರ್ವಕ ಕೆಟ್ಟ ಮನಸ್ಥಿತಿಯವರಲ್ಲ.....

ಕೆಲವರು ಒಂದಷ್ಟು ಗಾಂಧಿಯವರ ಬರಹಗಳು ಮತ್ತು ಹೇಳಿಕೆಗಳು ಹೇಗೆ ದಲಿತ ವಿರೋಧಿಯಾಗಿವೆ ಮತ್ತು ಅಮಾನವೀಯವಾಗಿದೆ ಎಂಬುದನ್ನು ದಾಖಲೆಗಳ ಸಮೇತ ವಿವರಿಸುತ್ತಾರೆ. ಅದು ಬಹಳಷ್ಟು ನಿಜವೂ ಸಹ. ಆದರೆ ಅದರಲ್ಲಿ ಕೆಲವು ಗಾಂಧಿ ಪರಿವರ್ತನೆ ಹೊಂದುವ ಮೊದಲಿನ ಅಭಿಪ್ರಾಯ ಮತ್ತು ಅಂಬೇಡ್ಕರ್ ಅವರೊಂದಿಗೆ ಸಂಘರ್ಷದಲ್ಲಿ ಮೂಡಿದ್ದು ಜೊತೆಗೆ ಕೆಲವು ಸನ್ನಿವೇಶಗಳಲ್ಲಿ ಬೇರೆಯದೇ ಉದ್ದೇಶದಿಂದ ಹೇಳಿದ್ದು ಆಗಿವೆ. ಒಮ್ಮೆ ಒಬ್ಬ ವ್ಯಕ್ತಿಯನ್ನು ದ್ವೇಷಿಸಲು ಪ್ರಾರಂಭಿಸಿದರೆ ಆ ವ್ಯಕ್ತಿಯ ಎಲ್ಲಾ ಮಾತುಗಳು ಹಾಗೆಯೇ ಪ್ರತಿಧ್ವನಿಸುವ ಮನಃಶಾಸ್ತ್ರೀಯ ಗುಣಗಳನ್ನು ಇಲ್ಲಿ ನೆನಪಿಸಿಕೊಳ್ಳಬಹುದು...

ಪೂನಾ ಒಪ್ಪಂದದ ಸಂಪೂರ್ಣ ಮಾಹಿತಿಯನ್ನು ಅನೇಕ ಇತಿಹಾಸದ ಪುಸ್ತಕಗಳು ಮತ್ತು ಗೂಗಲ್ ಸರ್ಚನಲ್ಲಿ ಪಡೆಯ ಬಹುದು. ಅದನ್ನು ಇಲ್ಲಿ ಪ್ರಸ್ತಾಪಿಸಿದರೆ ತುಂಬಾ ದೀರ್ಘವಾಗುತ್ತದೆ. ಆದರೆ ಧಾರ್ಮಿಕ ಮತ್ತು ಆಧ್ಯಾತ್ಮಿಕ ಒಲವಿನ ಗಾಂಧಿಯವರಿಗೆ ಅಸ್ಪೃಶ್ಯ ದಲಿತ ಸಮುದಾಯಗಳು ಸನಾತನ ಧರ್ಮದ ಹಿಂದೂ ಜೀವನಶೈಲಿಯ ಭಾಗವೇ ಎಂದು ಸ್ಪಷ್ಟವಾಗಿ ಮತ್ತು ಬಲವಾಗಿ ನಂಬಿದ್ದರು. ಅವರಿಗೆ ಪ್ರತ್ಯೇಕ ಮೀಸಲಾತಿ ನೀಡಿದರೆ ನಮ್ಮ ಧರ್ಮ ಒಡೆದು ಹೋಗುತ್ತದೆ ಮತ್ತು ದಲಿತರು ಪ್ರತ್ಯೇಕವಾಗುತ್ತಾರೆ ಎಂಬ ಆತಂಕ ಸದಾ ಕಾಡುತ್ತಿರುತ್ತದೆ. ಅವರು ನಮ್ಮಂತೆ ಮನುಷ್ಯರು. ಏನೋ ಕಾರಣದಿಂದಾಗಿ ಪ್ರತ್ಯೇಕವಾಗಿದ್ದಾರೆ. ನಮ್ಮ ಮನಸ್ಥಿತಿಯನ್ನು ಬದಲಾಯಿಸಿಕೊಳ್ಳುವ ಮೂಲಕ ಮತ್ತು ಸ್ವಾತಂತ್ರ್ಯ ನಂತರ ಈ ದೇಶದಿಂದ ಅಸ್ಪೃಶ್ಯತೆಯನ್ನು ಸಂಪೂರ್ಣ ನಿವಾರಿಸಿಕೊಳ್ಳಬಹುದು ಎಂದು ಬಲವಾಗಿ ನಂಬಿರುತ್ತಾರೆ. ಅಷ್ಟೊಂದು ವಿಶಾಲ ಹೃದಯಿಯವರು. ಆದರೆ ಜಾತಿಯ ಮೂಲಭೂತವಾದಿಗಳ ನಡುವೆ ಅದು ಅಸಾಧ್ಯ, ಮರ್ಯಾದ ಹತ್ಯೆಗೂ ನಮ್ಮ ಜನ ಸಿದ್ದರಿದ್ದಾರೆ ಎಂಬುದನ್ನು ಗ್ರಹಿಸಲು ಅವರು ವಿಫಲರಾಗುತ್ತಾರೆ. ಅದರ ಪರಿಣಾಮ ಗಾಂಧಿ ಶಾಶ್ವತವಾಗಿ ಕೆಲವು ದಲಿತ ನಾಯಕರ ವಿರೋಧಿಗಳಾಗಿಯೇ ಉಳಿದರು.....

ಅಂಬೇಡ್ಕರ್ ಅವರಿಗೆ ಹೋಲಿಸಿದರೆ ದಲಿತ ಶೋಷಣೆಗೆ ಗಾಂಧಿಯವರ ಕೊಡುಗೆ ಅತ್ಯಲ್ಪ. ಕೊನೆಯ ಹಂತದಲ್ಲಿ ಎಲ್ಲರ ಪ್ರತಿರೋಧದ ನಡುವೆಯೂ ದಲಿತರನ್ನು ಮುಖ್ಯವಾಹಿನಿಗೆ ಸೇರಿಸಲು ತಾವು ಸೇರಿ ಅನೇಕ ಒತ್ತಡಗಳನ್ನು ನಿರ್ಮಿಸುತ್ತಾರೆ ಮತ್ತು ಆಚರಣೆಗೆ ತರುತ್ತಾರೆ. ಆದರೆ ಅಂಬೇಡ್ಕರ್ ದೃಷ್ಟಿಯಲ್ಲಿ ಅದು ಕೇವಲ ನಾಟಕ ಎಂದು ಟೀಕೆಗೆ ಒಳಗಾಗುತ್ತದೆ. ಒಂದು ಹಂತದಲ್ಲಿ ಅಂಬೇಡ್ಕರ್ ಗಾಂಧಿಯವರನ್ನು ಅನೇಕ ಹತಾಶೆಗಳ ಕಾರಣ ಸಾಕಷ್ಟು ವಿರೋಧಿಸುತ್ತಾರೆ. ಆಗಿನ ದೇಶದ ನಾಯಕತ್ವ ಗಾಂಧಿಯವರ ಬಳಿ ಇದ್ದುದರಿಂದ ಸಹಜವಾಗಿಯೇ ಅವರನ್ನೇ ಪ್ರಶ್ನಿಸಬೇಕಾಗುತ್ತದೆ. ಆದರೆ ಅದು ಈಗಿನ ಕಾಲಘಟ್ಟಕ್ಕೆ ಅಷ್ಟು ಸೂಕ್ತವಾಗುವುದಿಲ್ಲ.....

ಅಂಬೇಡ್ಕರ್ ಅವರೊಂದಿಗೆ ಮತ್ತು ಅವರಿಗಾಗಿ ಗಾಂಧಿ ಸಂಘರ್ಷ ನಡೆಸುತ್ತಾರೆ, ಉಪವಾಸ ಮಾಡುತ್ತಾರೆ, ಗಾಂಧಿ ಅತ್ಯಂತ ಪ್ರಬಲವಾಗಿದ್ದ ಕಾಲದಲ್ಲಿಯೇ ಅಂಬೇಡ್ಕರ್ ಸಂವಿಧಾನ ಕರಡು ರಚನಾ ಸಮಿತಿಯ ಅಧ್ಯಕ್ಷರಾಗುತ್ತಾರೆ, ಪ್ರಾರಂಭದ ನೆಹರು ಸಂಪುಟದಲ್ಲಿ ಮಂತ್ರಿಯಾಗುತ್ತಾರೆ ಎಂಬುದು ಗಾಂಧಿ ಅಂಬೇಡ್ಕರ್ ಅವರನ್ನು ಈಗಿನ ಉಗ್ರ ದಲಿತರು ವಿರೋಧಿಸುವಷ್ಟು ಮತ್ತು ಭಾವಿಸುವಷ್ಟು ಗಾಂಧಿ ದ್ವೇಷಿಸುತ್ತಿರಲಿಲ್ಲ ಎಂಬುದಕ್ಕೆ ಸಾಕಷ್ಟು ಪುರಾವೆ ಒದಗಿಸುತ್ತದೆ.....

ಇರಲಿ, ಏನೇ ಆಗಲಿ ಗಾಂಧಿ ಮತ್ತು ಅಂಬೇಡ್ಕರ್ ಅವರಿಗೆ ಅವರು ಬಯಸಿದಂತೆ ಅಭಿಪ್ರಾಯ ರೂಪಿಸಿಕೊಳ್ಳುವ, ಹೋರಾಡುವ, ಬದುಕುವ ಸಂಪೂರ್ಣ ಸ್ವಾತಂತ್ರ್ಯವಿದೆ ಹಾಗೆಯೇ ಅದನ್ನು ವಿಮರ್ಶಿಸುವ ಸ್ವಾತಂತ್ರ್ಯ ಮತ್ತು ಅವರ ಬಗ್ಗೆ ಯಾವುದೇ ಅಭಿಪ್ರಾಯ ಹೊಂದುವ ಸ್ವಾತಂತ್ರ್ಯ ನಮಗೂ ಇದೆ. ಆದರೆ ಇತಿಹಾಸ ವರ್ತಮಾನಕ್ಕೆ ಪಾಠವಾಗಬೇಕೆ ಹೊರತು ದ್ವೇಷದ ಹೊರೆಯಾಗಬಾರದು...

ಗಾಂಧಿಯನ್ನು ವಿರೋಧಿಸುವ ಸ್ವಾತಂತ್ರ್ಯ ಎಲ್ಲರಿಗೂ ಇದೆ. ಆದರೆ ಅವರನ್ನು ಅತ್ಯುಗ್ರವಾಗಿ ದ್ವೇಷಿಸಿದರೆ ಅದು ಮುಖ್ಯವಾಗಿ ದಲಿತ ಚಳವಳಿಗೆ ಸ್ವಲ್ಪ ಹಿನ್ನಡೆಯಾಗಬಹುದು ಮತ್ತು ಅದನ್ನು ಮತ್ತೆ ಮತ್ತೆ ಮುನ್ನಲೆಗೆ ತರುವುದು ಸಹ ಅನವಶ್ಯಕ ಎಂದು ಅತ್ಯಂತ ಆತ್ಮೀಯವಾಗಿ, ಪ್ರೀತಿಯಿಂದ, ಕಾಳಜಿಯಿಂದ ಎಚ್ಚರಿಸುತ್ತಾ.....

ಈಗ ಗಾಂಧಿ ಮತ್ತು ಅಂಬೇಡ್ಕರ್ ಇಬ್ಬರೂ ಇಲ್ಲ. ಆದರೆ ನಾವಿದ್ದೇವೆ. ನಮಗೆ ಅನುಭವವಿದೆ, ಅರಿವಿದೆ, ಅವಕಾಶವಿದೆ. ನಾವುಗಳು ಸಮ ಸಮಾಜದ ನಿರ್ಮಾಣಕ್ಕಾಗಿ ಏನನ್ನಾದರೂ ಮಾಡೋಣ. ಗಾಂಧಿಯನ್ನು ದ್ವೇಷಿಸುತ್ತಾ ಕಾಲ ಕಳೆಯುವ ಬದಲು ಕಟ್ಟುವ ಕೆಲಸ ಮಾಡೋಣ. ....

ಕೊನೆಯದಾಗಿ, ಗಾಂಧಿ ಪರಿಪೂರ್ಣರೇನು ಅಲ್ಲ. ಆದರೆ ಅತ್ಯಂತ ಉಗ್ರವಾಗಿ ದ್ವೇಷಿಸುವಷ್ಟು ಕೆಟ್ಟವರು ಅಲ್ಲ. ನೈತಿಕತೆಗೆ ಗಾಂಧಿ ಸಾಕ್ಷಿ ಪ್ರಜ್ಞೆ, ಮಾನವೀಯತೆಗೆ, ಸಾಮಾಜಿಕ ಸಾಮರಸ್ಯಕ್ಕೆ ಅಂಬೇಡ್ಕರ್ ಸಾಕ್ಷಿ ಪ್ರಜ್ಞೆ ಎಂಬ ಬುದ್ದ ಪ್ರಜ್ಞೆ ನಮ್ಮೆಲ್ಲರಲ್ಲಿ ಮೂಡಲಿ ಎಂದು ಆಶಿಸುತ್ತಾ.....

ಇದು ಸರಳ ನಿರೂಪಣೆ ಮಾತ್ರ. ಆಳವಾಗಿ ಮತ್ತಷ್ಟು ಚರ್ಚೆ ಬಯಸುವ ವಿಷಯ. ಅದನ್ನು ಆಸಕ್ತರು ಸಮಯವಾದಾಗ ನೇರವಾಗಿ ಮಾತನಾಡೋಣ...

ಧನ್ಯವಾದಗಳು....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,





» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಗಂಗಾಮತ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

**ಚಿತ್ರದುರ್ಗ:** 2023–24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಗಂಗಾಮತ ಸಮಾಜದ ಅರ್ಹ ವಿದ್ಯಾರ್ಥಿಗಳಿಂದ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಚಿತ್ರದುರ್ಗ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ಲಿಖಿತ ಅರ್ಜಿ ಜೊತೆಗೆ ಅಂಕಪಟ್ಟಿ ಜಾತಿ ಪತ್ರದೊಂದಿಗೆ 2024ರ ನವೆಂಬರ್ 10 ರೊಳಗೆ ಅರ್ಜಿಗಳನ್ನು ಸಲ್ಲಿಸಲು ಸೂಚಿಸಲಾಗಿದೆ. 2023–24ನೇ ಸಾಲಿನಲ್ಲಿ ಶ್ರೀ ಗಂಗಾ ವಿದ್ಯಾಸಿರಿ ಯೋಜನೆಯಡಿ ಎಂಬಿಬಿಎಸ್, ಡೆಂಟಲ್, ಬಿಎಎಂಎಸ್, ಬಿ.ಇ, ಬಿ.ಎಸ್‌ಸಿ (ಎಜಿ/ಹಾರ್ಟ್) ಸೇರಿದಂತೆ ವಿವಿಧ ವಿಷಯಗಳನ್ನು ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಹಾಗೂ ಐಎಎಸ್, ಕೆಎಎಸ್ ತರಬೇತಿ ಪಡೆಯುತ್ತಿರುವ ಸಮಾಜದ ಬಡ ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದಲ್ಲಿ ಆರ್ಥಿಕವಾಗಿ ಪುರಸ್ಕರಿಸಲು ರಾಜ್ಯ ಗಂಗಾಮತ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು ನಿಗಧಿತ ಅರ್ಜಿ ನಮೂನೆಯಲ್ಲಿ ಅಂಕಪಟ್ಟಿ, ಜಾತಿ ಪತ್ರ, ಫೋಟೋ, ಕಾಲೇಜಿನ ದೃಢೀಕರಣ ಹಾಗೂ ಬ್ಯಾಂಕ್ ವಿವರಗಳೊಂದಿಗೆ 2024ರ ನವೆಂಬರ್ 10 ರೊಳಗೆ ಅರ್ಜಿ ಸಲ್ಲಿಸಲು ಸೂಚಿಸಿದೆ.ಹೆಚ್ಚಿನ ಮಾಹಿತಿಗಾಗಿ ವಿದ್ಯಾರ್ಥಿಗಳು 7259726367 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದು ಹಾಗೂ ರಾಜ್ಯ ಸಂಘದಿಂದ ನೀಡಲಾಗಿರುವ ಪ್ರಕಟಣೆ ಗಮನಿಸಬೇಕು ಹಾಗೂ ವೆಬ್‌ಸೈಟ್ http/ksgewa.com ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಂತೆ ಚಿತ್ರದುರ್ಗ ಜಿಲ್ಲಾ ಗಂಗಾಮತ ನೌಕರರ ಸಂಘದ ಅಧ್ಯಕ್ಷ ಬಿ.ಹನುಮಂತಪ್ಪ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T